ಸಂಪುಟ : 4 ಸಂಚಿಕೆ : 34 ಪುಟ : 4 ಬೆಲೆ : ರೂ. 4 ಶನಿವಾರ, ಮಾರ್ಚ್, 18, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ




# ಬೆಳಗಾವಿ ವರದಿ


BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 34 Pages : 4 Rate : 4 Rs Saturday, March 18, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com


## ಅದಾನಿ ಪ್ರಕರಣ: ಗಾಂಧೀಜಿ ಪ್ರತಿಮೆ ಎದುರು ಕಾಂಗ್ರೆಸ್ ನಾಯಕರು ಪ್ರತಿಭಟನೆ



ದೆಹಲಿ: ಸೋನಿಯಾ ಗಾಂಧಿ ಸೇರಿದಂತೆ ವಿರೋಧ ಪಕ್ಷದ ಸಂಸದರು ಅದಾನಿ ವಿವಾದಕ್ಕೆ ಸಂಬಂಧಿಸಿದಂತೆ ಸಂಸತ್ ಭವನದ ಮಹಾತ್ಮ ಗಾಂಧಿ ಪ್ರತಿಮೆ ಎದುರು ಪ್ರತಿಭಟನೆಗೆ ಮುಂದಾಗಿದ್ದಾರೆ. ಅದಾನಿ ಸಮೂಹದ ಮೇಲಿನ ವಂಚನೆ ಆರೋಪಗಳ ತನಿಖೆ ನಡೆಸುವಂತೆ ಒತ್ತಾಯಿಸಿ ಸೋನಿಯಾ ಗಾಂಧಿ ಸೇರಿದಂತೆ ವಿರೋಧ ಪಕ್ಷದ ಸಂಸದರು ಪ್ರತಿಭಟನೆ ನಡೆಸಿದ್ದರು.

ಆದಾನಿ ಸಮೂಹವು ಕೃತಕವಾಗಿ ಷೇರುಗಳ ಬೆಲೆ ಏರಿಳಿತ ಮಾಡುವ ಮೂಲಕ ಖರೀದಿದಾರರನ್ನು ವಂಚಿಸಿತ್ತು ಎಂಬ ಕುರಿತು ಅಮೆರಿಕದ ಹೂಡಿಕೆ ಸಂಶೋಧನಾ ಸಂಸ್ಥೆ ಹಿಂಡೆಬ್‌ಬರ್ಗ್ ರಿಸರ್ಚ್ ವರದಿಯ ಬಳಿಕ ಕಂಪನಿಯ ಷೇರು ಮೌಲ್ಯ ಭಾರೀ ಪ್ರಮಾಣದಲ್ಲಿ ಕುಸಿದಿತ್ತು. ಈ ಕುರಿತಂತೆ ಜಂಟಿ ಸಂಸದೀಯ ಸಮಿತಿ ತನಿಖೆಗೆ ವಿರೋಧ ಪಕ್ಷಗಳು ಒತ್ತಾಯಿಸುತ್ತಿದೆ.

ಅದಾನಿ ಪ್ರಕರಣವನ್ನು ಜಂಟಿ ಸಂಸದೀಯ ಸಮಿತಿಯಿಂದ ತನಿಖೆ ನಡೆಸುವಂತೆ ಒತ್ತಾಯಿಸಿ 18 ವಿರೋಧ ಪಕ್ಷಗಳ ನಾಯಕರು ಸಂಸತ್ತಿನಿಂದ ಗುರುವಾರ ಮಧ್ಯಾಹ್ನ ಮೆರವಣಿಗೆ ನಡೆಸಿತು. ಮೆರವಣಿಗೆ ಆರಂಭವಾಗುತ್ತಿದ್ದಂತೆಯೇ ದೆಹಲಿ ಪೊಲೀಸರು ನಾಯಕರನ್ನು ತಡೆದರು.

ಅದಾನಿ ಪ್ರಕರಣ ಜೆಪಿಸಿ ತನಿಖೆಗೆ ನೀಡಲು ಒತ್ತಾಯ: ಪ್ರತಿಭಟನಾನಿರತ ನಾಯಕರು ಇ.ಡಿ ಕಚೇರಿ ಕಡೆಗೆ ಮೆರವಣಿಗೆ ಸಾಗುವುದನ್ನು ತಡೆಯಲು ದೆಹಲಿ ಪೊಲೀಸರು ಬ್ಯಾರಿಕೇಡ್‌ಗಳನ್ನು ಅಳವಡಿಸಿದ್ದರು, ಭಾರಿ ಪ್ರಮಾಣದಲ್ಲಿ ಸಿಬ್ಬಂದಿಯನ್ನು ನಿಯೋಜಿಸಿದ್ದರು. ಅಲ್ಲದೆ, ಸ್ಥಳದಲ್ಲಿ ಸೆಕ್ಷನ್ 144ನ್ನೂ ಜಾರಿಗೊಳಿಸಿದ್ದರು. ಹೀಗಾಗಿ ನಾಯಕರು ಪ್ರತಿಭಟನಾ ಮೆರವಣಿಗೆ ನಡೆಸಲು ಸಾಧ್ಯವಾಗಲಿಲ್ಲ.

ಪ್ರತಿಭಟನೆಗೆ ಪೊಲೀಸರಿಂದ ತಡೆ: ವಿಪಕ್ಷ ಸದಸ್ಯರಿಗೆ ಮುಂದೆ ಸಾಗಲು ಸಾಧ್ಯವಾಗದೆ ಇದ್ದಾಗ, ಮೆರವಣಿಗೆಯನ್ನು ರದ್ದುಗೊಳಿಸಿ ಸಂಸತ್‌ಗೆ ವಾಪಸಾದರು. ತಾವು ಇ.ಡಿಯಿಂದ ಅಪಾಯಿಂಟ್‌ಮೆಂಟ್ ಕೇಳಿದ್ದು, ಶೀಘ್ರವೇ ಜಂಟಿ ದೂರು ಪತ್ರ ಬಿಡುಗಡೆ ಮಾಡುವುದಾಗಿ ಹೇಳಿದರು.

ನಮ್ಮನ್ನು ಇಲ್ಲಿಯೇ ತಡೆದಿದ್ದಾರೆ. ನಾವು 200 ಜನರಿದ್ದರೆ, ಅಲ್ಲಿ ಕನಿಷ್ಠ 2,000 ಪೊಲೀಸ್ ಸಿಬ್ಬಂದಿ ಇದ್ದಾರೆ. ಅವರು ನಮ್ಮ ಧ್ವನಿಯನ್ನು ಹತ್ತಿಕ್ಕಲು ಬಯಸಿದ್ದಾರೆ. ಜೊತೆಗೆ ಪ್ರಜಾಪ್ರಭುತ್ವದ ಬಗ್ಗೆ ಮಾತನಾಡುತ್ತಾರೆ" ಎಂದು ಪೊಲೀಸರ ವಿರುದ್ಧ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕಿಡಿಕಾರಿದರು. "ಈ ವಿಚಾರವನ್ನು ಯಾರಾದರೂ ಚರ್ಚೆಯೊಂದರಲ್ಲಿ ಪ್ರಸ್ತಾಪಿಸಿದರೆ, ಅವರನ್ನು ದೇಶದ್ರೋಹಿಗಳು ಎಂದು ಕರೆಯಲಾಗುತ್ತದೆ" ಎಂದು ಹರಿಹಾಯ್ದರು.

ರಾಜ್ಯಸಭೆಯ ಕಾಂಗ್ರೆಸ್ ಉಪನಾಯಕ ಪ್ರಮೋದ್ ತಿವಾರಿ ಮಾತನಾಡಿ, ವಿರೋಧ ಪಕ್ಷಗಳ 200 ಸಂಸದರು ಅದಾನಿ ವಿಚಾರ ಸಂಬಂಧ ಮನವಿ ಪತ್ರ ಸಲ್ಲಿಸಲು ಇಡಿ ಕಚೇರಿಗೆ ಪ್ರತಿಭಟನಾ ಮೆರವಣಿಗೆ ನಡೆಸುತ್ತಿದ್ದೆವು. ಆದರೆ, ಪೊಲೀಸರು ನಮ್ಮನ್ನು ಬಲವಂತವಾಗಿ ತಡೆಹಿಡಿದರು. ಇದೀಗ ನಾವು ಮತ್ತೆ ಸಂಸತ್ತಿಗೆ ಹೋಗುತ್ತಿದ್ದೇವೆ. ಸಂಸತ್ತಿನಲ್ಲಿ ಪ್ರತಿಭಟನೆ ನಡೆಸುತ್ತೇವೆ ಎಂದು ಹೇಳಿದರು.

ಶಿವಸೇನೆ ನಾಯಕ ಸಂಜಯ್ ರಾವತ್ ಅವರು ಮಾತನಾಡಿ, ಪ್ರತಿಭಟನೆಯಿಂದ ಹಿಂದೆ ಸರಿದಿಲ್ಲ. ನಮ್ಮ ಪ್ರತಿಭಟನಾ ಮೆರವಣಿಗೆಯನ್ನು ಮುಂದುವರೆಸುತ್ತೇವೆಂದು ತಿಳಿಸಿದ್ದಾರೆ. ಹೀಗಾಗಿ ಇಂದೂ ಕೂಡ ಪ್ರತಿಭಟನೆಯನ್ನು ಕಾಂಗ್ರೆಸ್ ನಾಯಕರು ನಡೆಸುತ್ತಿದ್ದಾರೆ. ಜಂಟಿ ಸಂಸದೀಯ ಸಮಿತಿ ತನಿಖೆಗೆ ಅದಾನಿ ಪ್ರಕರಣ ನೀಡುವವರೆಗೂ ಪ್ರತಿಭಟನೆ ಮೂಂದುವರೆಸುವುದಾಗಿ ಹೇಳಿದ್ದಾರೆ.

## ಅಪ್ಪು ಸದಾ ಅಜರಾಮರ: ಪುನೀತ್ ನೆನೆದು 'ಸಿಎಂ ಬೊಮ್ಮಾಯಿ' ಟ್ವೀಟ್



ಬೆಂಗಳೂರು : ಅಪ್ಪು ಸದಾ ಅಜರಾಮರ ಎಂದು ಸಿಎಂ ಬೊಮ್ಮಾಯಿ ಟ್ವೀಟ್ ಮಾಡುವ ಮೂಲಕ ಪುನೀತ್ ರಾಜ್ ಕುಮಾರ್ ಅವರಿಗೆ ಹುಟ್ಟು ಹಬ್ಬದ ಶುಭಾಶಯ ಕೋರಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಸಿಎಂ ಬೊಮ್ಮಾಯಿ ಅತಿ ಚಿಕ್ಕ ವಯಸ್ಸಿನಲ್ಲಿಯೇ ಅಗಾಧವಾದ ಸಾಧನೆಗೈದು, ಎಲ್ಲರಿಗೂ ಮಾದರಿಯಾಗಿರುವ ಪ್ರೀತಿಯ ಅಪ್ಪು, ಕರ್ನಾಟಕ ರತ್ನ ಪುನೀತ್ ರಾಜಕುಮಾರ್ ಅವರ ಜನ್ಮಸ್ಮರಣೆಯಂದು ಗೌರವಪೂರ್ವಕ ನಮನಗಳು. ಅಪ್ಪು ಸದಾ ಅಜರಾಮರ ಎಂದು ಟ್ವೀಟ್ ಮಾಡಿದ್ದಾರೆ.

## ಸಿ.ಟಿ ರವಿ ವಿರುದ್ಧ ಕಿಡಿಕಾರಿದ ವೀರಶೈವ ಲಿಂಗಾಯತರು



ಬೆಂಗಳೂರು: ವಿಧಾನಸಭೆ ಚುನಾವಣೆ ಹತ್ರ ಬರುತ್ತಿದೆ. ಹೀಗಾಗಿ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಈಗಾಗಲೇ ಚುನಾವಣೆ ಪ್ರಚಾರ ಭರಾಟೆ ಶುರುವಾಗಿದೆ.

ಈ ನಡುವೆಯೇ ಚಿಕ್ಕಮಗಳೂರಿನಲ್ಲಿ ವೀರಶೈವ ಲಿಂಗಾಯತರು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿಟಿ ರವಿ ವಿರುದ್ಧ ತಿರುಗಿಬಿದ್ದಿದ್ದಾರೆ.

ಇದೀಗ ರಾಜ್ಯ ವೀರಶೈವ ಲಿಂಗಾಯತ ಸಂಘಟನಾ ವೇದಿಕೆ, ಸಿಟಿ ರವಿ ವಿರುದ್ಧ ಸಂಘಟನಾ ವೇದಿಕೆಯಲ್ಲಿ ಸಿ.ಟಿ ರವಿ ಕಿಡಿಕಾರಿದ್ದಾರೆ. ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಮತ್ತು ಅವರ ಪುತ್ರ ವಿಜಯೇಂದ್ರ ಹೇಳಿಕೆಗೆ ಟಾಂಗ್ ಕೊಡುತ್ತಿರುವುದಕ್ಕೆ ವೀರಶೈವ ಲಿಂಗಾಯುತ ಸಂಘಟನೆ ಕೋಪಗೊಂಡಿದ್ದಾರೆ.

ಸಿ. ಟಿ ರವಿ ಚುನಾವಣೆ ಪ್ರಚಾರದಲ್ಲಿ ಕಂಡು ಬಂದರೆ ಮುತ್ತಿಗೆ ಹಾಕಬೇಕು. ಕಿತ್ತೋದ ಸಿ.ಟಿ ರವಿ ಎಂದು ಘೋಷಣೆ ಕೂಗಬೇಕು ಪತ್ರಿಕಾ ಪ್ರಕಟಣೆ ಮೂಲಕ ಕರೆ ಕೊಟ್ಟಿದೆ.ಅಲ್ಲದೇ ಲಿಂಗಾಯತ ಸಮಾಜಕ್ಕೆ ಕ್ಷಮೆ ಕೇಳಬೇಕು. ಇಲ್ಲದಿದ್ದರೆ ಒಂದು ವಾರದಲ್ಲಿ ನಿಮ್ಮ ಮನೆಗೆ ಬಂದು ಹೋರಾಟ ಮಾಡುತ್ತೇವೆ ಎಂದು ಸಿಟಿ ರವಿಗೆ ಎಚ್ಚರಿಕೆ ನೀಡಿದೆ.

## ಸಿಎಂ ಬೊಮ್ಮಾಯಿ ವಿರುದ್ಧ ವಿನಯ್ ಕುಲ್ಕರ್ಣಿ ಸ್ಪರ್ಧೆ ಫಿಕ್ಸ್



ನವದೆಹಲಿ: ವಿಧಾನಸಭಾ ಚುನಾವಣಾ ಅಖಾಡ ದಿನದಿಂದ ದಿನಕ್ಕೆ ರಂಗೇರುತ್ತಿದ್ದು, ಮಾಜಿ ಸಚಿವ ವಿನಯ್ ಕುಲ್ಕರ್ಣಿ ಸಿಎಂ ಬಸವರಾಜ್ ಬೊಮ್ಮಾಯಿ ವಿರುದ್ಧ ಸ್ಪರ್ಧಿಸುವುದು ಖಚಿತವಾಗಿದೆ.

ನವದೆಹಲಿಯಲ್ಲಿ ಎಐಸಿಸಿ ಕಚೇರಿಯಲ್ಲಿ ನಡೆದ ಕಾಂಗ್ರೆಸ್ ಸ್ಕ್ರೀನಿಂಗ್ ಕಮಿಟಿ ಸಭೆಯಲ್ಲಿ ವಿನಯ್ ಕುಲ್ಕರ್ಣಿ ಸಿಎಂ ಬಸವರಾಜ್ ಬೊಮ್ಮಾಯಿ ವಿರುದ್ಧ ಶಿಗ್ಗಾವಿ ಕ್ಷೇತ್ರದಿಂದ ಸ್ಪರ್ಧಿಸಲು ಗ್ರೀನ್ ಸಿಗ್ನಲ್ ನೀಡಲಾಗಿದೆ.

ಮಾಜಿ ಸಚಿವ ವಿನಯ್ ಕುಲ್ಕರ್ಣಿ, ಈ ಬಾರಿ ಚುನಾವಣೆಯಲ್ಲಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ವಿರುದ್ಧ ಶಿಗ್ಗಾವಿಯಿಂದ ಸ್ಪರ್ಧೆ ಮಾಡುವಂತೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹಾಗೂ ವಿಪಕ್ಷ ನಾಯಕ ಸಿದ್ದರಾಮಯ್ಯ ಒತ್ತಾಯಿಸಿದ್ದರು.

ಕಾಂಗ್ರೆಸ್ ಆಂತರಿಕ ಸಮೀಕ್ಷೆ ಪ್ರಕಾರ ವಿನಯ್ ಕುಲ್ಕರ್ಣಿ ಸಿಎಂ ಬೊಮ್ಮಾಯಿ ಅವರಿಗೆ ಪ್ರಬಲ ಸ್ಪರ್ಧಿ ಎಂಬ ಲೆಕ್ಕಾಚಾರ ಹಾಕಲಾಗಿದೆ. ಈ ನಿಟ್ಟಿನಲ್ಲಿ ಇಂದು ನಡೆದ ಕಾಂಗ್ರೆಸ್ ಸ್ಕ್ರೀನಿಂಗ್ ಕಮಿಟಿ ಸಭೆಯಲ್ಲಿ ವಿಷಯ ಪ್ರಸ್ತಾಪವಾಗಿದ್ದು, ವಿನಯ್ ಕುಲ್ಕರ್ಣಿ ಸ್ಪರ್ಧೆಗೆ ಗ್ರೀನ್ ಸಿಗ್ನಲ್ ನೀಡಲಾಗಿದೆ.

## ಕರ್ನಾಟಕದಲ್ಲಿ ಮದರಸಾಗಳ ಅಗತ್ಯವಿಲ್ಲ, ಎಲ್ಲವನ್ನೂ ಮುಚ್ಚುತ್ತೇವೆ: ಅಸ್ಸಾಂ ಸಿಎಂ ಹಿಮಂತ ಬಿಸ್ವಾ ಶರ್ಮಾ



ಬೆಳಗಾವಿ: ನವ ಭಾರತಕ್ಕೆ ಮದರಸಾಗಳ ಅವಶ್ಯಕತೆ ಇಲ್ಲವಾಗಿದ್ದು, ಶೀಘ್ರದಲ್ಲೇ ರಾಜ್ಯದ ಎಲ್ಲಾ ಮದರಸಾಗಳನ್ನು ಮುಚ್ಚುವ ಕುರಿತು ಚಿಂತನೆ ಮಾಡಲಾಗುತ್ತಿದೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಹೇಳಿದ್ದಾರೆ.

ಬೆಳಗಾವಿ (ದಕ್ಷಿಣ) ಶಾಸಕ ಅಭಯ ಪಾಟೀಲ ಅವರು ಇಲ್ಲಿನ ಶಿವಾಜಿ ಗಾರ್ಡನ್‌ನಲ್ಲಿ 'ಶಿವಚರಿತ್ರೆ' ಶೀರ್ಷಿಕೆಯ ವಸ್ತುಪ್ರದರ್ಶನವನ್ನು ಉದ್ಘಾಟಿಸಿ, ಮಾತನಾಡಿದ ಅವರು, ಮದರಸಾ ಶಿಕ್ಷಣಕ್ಕೆ ಬ್ರೇಕ್ ಹಾಕಲು ಅಸ್ಸಾಂ ಸರ್ಕಾರ ಮುಂದಾಗಿದೆ ಎಂದು ಹೇಳಿದರು.ನಮ್ಮ ಸರ್ಕಾರವು ಈಗಾಗಲೇ ಅಸ್ಸಾಂನಲ್ಲಿ 600 ಮದರಸಾಗಳನ್ನು ಮುಚ್ಚಿದೆ. ಶೀಘ್ರದಲ್ಲೇ ಉಳಿದ ಮದರಸಾಗಳನ್ನೂ ಮುಚ್ಚುವ ಯೋಜನೆಯನ್ನು ಜಾರಿಗೆ ತರಲಿದೆ. ನಮಗೆ ಮದರಸಾಗಳ ಅಗತ್ಯವಿಲ್ಲ. ನಮಗೆ ಎಂಜಿನಿಯರ್‌ಗಳು ಮತ್ತು ವೈದ್ಯರು ಬೇಕು ಎಂದು ಹಿಮಂತ ಬಿಸ್ವಾ ಶರ್ಮಾ ಹೇಳಿದ್ದಾರೆ.

ಕಾಂಗ್ರೆಸಿಗರು ಬಾಬರಿ ಮಸೀದಿಯ ಬಗ್ಗೆ ಮಾತ್ರ ಮಾತನಾಡುತ್ತಿದ್ದಾರೆ, ರಾಮಮಂದಿರದ ಬಗ್ಗೆ ಮಾತನಾಡುವುದಿಲ್ಲ ಎಂದ ಅವರು, ಮೊಘಲರಂತೆಯೇ ಇರುವ ಕಾಂಗ್ರೆಸ್ಸಿಗರಿಗೆ ಜನರು ತಕ್ಕ ಪಾಠ ಕಲಿಸಬೇಕು, ಅವರನ್ನು ದೇಶದಿಂದ ಕಿತ್ತೊಗೆಯುವ ಅಗತ್ಯವಿದೆ ಎಂದರು.

ಅಸ್ಸಾಂ ಸೇರಿದಂತೆ ಇಡೀ ಉತ್ತರ ಭಾರತ ಎಂದೂ ಔರಂಗಜೇಬನ ಆಡಳಿತದ ಹಿಡಿತಕ್ಕೆ ಸಿಕ್ಕಿರಲಿಲ್ಲ. ಆದರೂ, ಕಮ್ಯುನಿಸ್ಟ್ ಸಾಹಿತಿಗಳು ಇಡೀ ಭಾರತ ಔರಂಗಜೇಬನ ಅಧೀನದಲ್ಲಿತ್ತು ಎಂದು ತಿರುಚಿದ ಇತಿಹಾಸ ಸೃಷ್ಟಿಸಿ ಹೋಗಿದ್ದಾರೆ. ಆದರೆ ಅವರು ಬಹಿರಂಗಪಡಿಸದ ವಿಷಯವೆಂದರೆ ಶಿವಾಜಿ ಮಹಾರಾಜರು ಔರಂಗಜೇಬ್‌ಗಿಂತ 10 ಪಟ್ಟು ಹೆಚ್ಚು ಸಮರ್ಥ ಯೋಧನಾಗಿದ್ದರು ಎಂದು ಅವರು ಹೇಳಿದರು.

## ನಮ್ಮ ಪ್ರಜಾಪ್ರಭುತ್ವ ರಕ್ಷಣೆಗೆ ವಿದೇಶಿ ಶಕ್ತಿಗಳನ್ನು ರಾಹುಲ್ ಗಾಂಧಿ ಎಂದಿಗೂ ಒತ್ತಾಯಿಸಿಲ್ಲ: ಶಶಿ ತರೂರ್



ನವದೆಹಲಿ: ಭಾರತದಲ್ಲಿನ ಪ್ರಜಾಪ್ರಭುತ್ವ ಕುರಿತು ಲಂಡನ್ ನಲ್ಲಿ ಹೇಳಿಕೆ ನೀಡಿರುವ ರಾಹುಲ್ ಗಾಂಧಿ ಕ್ಷಮೆಯಾಚಿಸಬೇಕೆಂದು ಬಿಜೆಪಿ ನಿರಂತರವಾಗಿ ಒತ್ತಾಯಿಸುತ್ತಿರುವಂತೆಯೇ, ನಮ್ಮ ರಾಷ್ಟ್ರದ ಪ್ರಜಾಪ್ರಭುತ್ವ ರಕ್ಷಿಸುವಂತೆ ವಿದೇಶಿ ಶಕ್ತಿಗಳನ್ನು ರಾಹುಲ್ ಗಾಂಧಿ ಒತ್ತಾಯಿಸಿಲ್ಲ ಎಂದು ಸಂಸದ ಶಶಿ ತರೂರ್ ಹೇಳಿದ್ದಾರೆ. ಈ ಕುರಿತು ಎಎನ್ ಐ ಸುದ್ದಿಸಂಸ್ಥೆಯೊಂದಿಗೆ ಶುಕ್ರವಾರ ಮಾತನಾಡಿದ ಶಶಿ ತರೂರ್, ನಮ್ಮ ಪ್ರಜಾಪ್ರಭುತ್ವ ರಕ್ಷಿಸಲು ದೇಶಕ್ಕೆ ಬರುವಂತೆ ವಿದೇಶಿ ಶಕ್ತಿಗಳನ್ನು ರಾಹುಲ್ ಗಾಂಧಿ ಒತ್ತಾಯಿಸಿಲ್ಲ, ಏನನ್ನೂ ಹೇಳದಿದ್ದರೂ ಕ್ಷಮೆಯಾಚನೆಗೆ ಒತ್ತಾಯಿಸುತ್ತಿರುವುದು ನಾನ್ ಸೆನ್ಸ್ ಎಂದರು.

ನಮ್ಮ ದೇಶದಲ್ಲಿ ಪ್ರಜಾಪ್ರಭುತ್ವ ಅಪಾಯದಲ್ಲಿದೆ. ಪ್ರತಿಯೊಬ್ಬರು ಇದನ್ನು ಅರಿಯಬೇಕಾಗಿದೆ. ಅದರಲ್ಲಿ ತಪ್ಪೇನೂ ಕೇಳಿಲ್ಲ ಎಂದು ಶಶಿ ತರೂರ್ ಹೇಳಿದರು. ಸಂಸತ್ತಿನ ಬಜೆಟ್ ಅಧಿವೇಶನ ಕುರಿತು ಮಾತನಾಡಿದ ಅವರು, ಸುಗುಮವಾಗಿ ಸಂಸತ್ ಕಾರ್ಯಕಲಾಪ ನಡೆಸುವುದು ಸರ್ಕಾರದ ಜವಾಬ್ದಾರಿ. ನಡೆಯುತ್ತಿರುವ ಬಜೆಟ್ ಅಧಿವೇಶನದಲ್ಲಿ ಹಣಕಾಸು ವಿಧೇಯಕ ಅಂಗೀಕಾರವಾಗಬೇಕಿದೆ. ಅಂತಹ ಪ್ರಮುಖ ವಿಚಾರಗಳಿರುವಾಗ ಸಂಸತ್ ಕಾರ್ಯ ಕಲಾಪಕ್ಕೆ ಅವಕಾಶ ನೀಡದಿರುವುದು ನನ್ ಸೆನ್ಸ್ ಎಂದರು.

## ನನ್ನ ಆಡು ಭಾಷೆ, ಸಂಸ್ಕೃತಿ, ಹೋರಾಟ ಕ್ಷೇತ್ರದ ಜನರಿಗೆ ಗೊತ್ತಿದೆ: ಶಿವಲಿಂಗೇಗೌಡ



ಹಾಸನ: ನನ್ನ ಆಡು ಭಾಷೆ, ನನ್ನ ಸಂಸ್ಕೃತಿ, ನನ್ನ ಹೋರಾಟ ನನ್ನ ಕ್ಷೇತ್ರದ ಜನರಿಗೆ ಗೊತ್ತಿದೆ. ಅಂತಿಮವಾದಂತಹ ತೀರ್ಮಾನವನ್ನು ಜನತೆ, ಜನಾರ್ದನ ಕೊಡ್ತಾರೆ ಎಂದು ಅರಸೀಕೆರೆ ಶಾಸಕ ಕೆ.ಎಂ ಶಿವಲಿಂಗೇಗೌಡ ಹೇಳಿದ್ದಾರೆ.

ಎಚ್.ಡಿ ರೇವಣ್ಣ ಹಾಗೂ ತಮ್ಮ ನಡುವಿನ ಸಂಭಾಷಣೆಯ ಆಡಿಯೋ ವೈರಲ್ ವಿಚಾರ ಸಂಬಂಧ ತೀವ್ರ ಬೇಸರ ವ್ಯಕ್ತಪಡಿಸಿರುವ ಅವರು, ನನ್ನ ಮತ್ತು ರೇವಣ್ಣ ಅವರ ನಡುವಿನ ಸಂಭಾಷಣೆ ವೈರಲ್ ಆಗಿದೆ. ನಾನು ರೇವಣ್ಣ ಅವರು ಅರ್ಧಗಂಟೆಗೂ ಹೆಚ್ಚು ಕಾಲ ಮಾತನಾಡಿದ್ದೇವೆ. ಆದರೆ ಅದನ್ನು ಎಡಿಟಿಂಗ್ ಮಾಡಿ ತಮಗೆ ಉಪಯುಕ್ತವಾಗುವ ರೀತಿಯಲ್ಲಿ ತುಂಡು ತುಂಡು ಮಾಡಿ ಸಾಮಾಜಿಕ ಜಾಲತಾಣದಲ್ಲಿ ಬಿಟ್ಟಿದ್ದಾರೆ. ನನ್ನ ಕ್ಷೇತ್ರದ ಜನರನ್ನ ದಿಕ್ಕುತಪ್ಪಿಸುವ ಕೆಲಸವನ್ನು ತಾವು ಮಾಡ್ತಾ ಇದ್ದೀರಿ. ಇದರಿಂದ ನೀವು ಯಶಸ್ಸು ಕಾಣುವುದಿಲ್ಲ. ಕ್ಷೇತ್ರದ ಜನತೆಗೆ ನಾನು ಯಾರು ಏನು ಅಂತಾ ಗೊತ್ತಿದೆ ಎಂದರು.

ಮಾಜಿ ಸಚಿವರಾಗಿ, ಜಿಲ್ಲೆಯ ನಾಯಕರಾಗಿ ಗುಬ್ಬಚ್ಚಿ ಮೇಲೆ ಬ್ರಹ್ಮಾಸ್ತ್ರ ಬಿಡುವಂತಹ ಕೆಲಸವನ್ನು ನೀವು ಏನ್ ಮಾಡ್ತಿದ್ದೀರಿ ನಿಮಗೆ ಶೋಭೆ ತರುವಂತಹದ್ದಲ್ಲ. ನೀವು ಕೀಪ್ಯಾಡ್ ಫೋನ್ ಇಟ್ಟುಕೊಂಡಿದ್ದೀರಿ, ನಾನು ಕೀಪ್ಯಾಡ್ ಫೋನ್ ಇಟ್ಟುಕೊಂಡಿದ್ದೀನಿ. ನಿಮಗೆ ಸಾಮಾಜಿಕ ಜಾಲತಾಣದ ಬಗ್ಗೆ ಅಷ್ಟು ಅರಿವಿಲ್ಲ ಅಂತ ಭಾವಿಸಿದ್ದೇನೆ. ನನಗೂ ಅದರ ಬಗ್ಗೆ ಅರಿವಿಲ್ಲ. ಆದರೆ ಯಾರೋ ಮಧ್ಯದಲ್ಲಿ ರಾಜಕೀಯ ಕುತಂತ್ರವನ್ನು ಮಾಡುವ ಕೆಲಸ ಮಾಡಿದ್ದಾರೆ ಎಂದು ತಿಳಿಸಿದ್ದಾರೆ.

ಅವರ ಮಾತಗಳನ್ನು ಕೇಳಿ ಇಂತಹ ಸಣ್ಣತನದ ರಾಜಕಾರಣ ನೀವು ಮಾಡಲಿಕ್ಕೆ ಪ್ರೇರಣೆಯನ್ನು ಕೊಡತಕ್ಕಂಹದ್ದು ನಿಮ್ಮ ರಾಜಕೀಯ ಜೀವನಕ್ಕೆ ಒಂದು ಕಳಂಕ ಆಗುತ್ತೆ. ರೇವಣ್ಣ ಅವರೇ ಇದಕ್ಕೆ ಅವಕಾಶವನ್ನು ಕೊಡಬೇಡಿ. ರಾಜಕೀಯದಲ್ಲಿ ಪಕ್ಷಾಂತರ ಅನ್ನುವುದು ಸರ್ವೆ ಸಾಮಾನ್ಯವಾದ ವಿಚಾರ. ನಿಮಗೂ ನಮಗೂ ಭಿನ್ನಾಭಿಪ್ರಾಯ ಬಂತು. ನಾವು ಇವತ್ತು ಬೇರೆ ಕಡೆ ಹೋಗ್ತಾ ಇದ್ದೀವಿ, ನೀವು ಬೇರೆ ಕಡೆ ಇದ್ದೀರಾ. ಯಾವುದೇ ರೀತಿಯಾದ ಭಿನ್ನಾಭಿಪ್ರಾಯ ನಮ್ಮಲ್ಲಿ ನಿಮ್ಮಲ್ಲಿ ಇಲ್ಲ. ಕೆಲವೊಂದು ವಿಚಾರಗಳಲ್ಲಿ ಭಿನ್ನಾಭಿಪ್ರಾಯ ಬಂದು ನಾವು ಬೇರೆ ಆಗಿದ್ದೇವೆ. ಅದಕ್ಕೆ ನೀವು ಈ ರೀತಿ ಸಣ್ಣತನಕ್ಕೆ ಇಳಿದು ಇಂತಹ ಪ್ರವೃತ್ತಿಯನ್ನು ರೂಢಿಮಾಡಿಕೊಳ್ಳಬಾರದು ಅದು ಒಳ್ಳೆಯದಲ್ಲ ಎಂದು ನಿಮ್ಮಲ್ಲಿ ಮನವಿ ಮಾಡುತ್ತಿದ್ದೇನೆ ಎಂದರು.

## ನಾನು ಪೂಜಾರಿ ಅಷ್ಟೆ, ಜನ ಹೇಳಿದ್ದು ದೇವರಿಗೆ ತಲುಪಿಸುತ್ತೇನೆ: ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿ



ನವದೆಹಲಿ: ಎಐಸಿಸಿ ಅಧ್ಯಕ್ಷರಿಗೆ ಎಲ್ಲವೂ ಗೊತ್ತಿದೆ. ರಾಜ್ಯ ರಾಜಕಾರಣ ಗೊತ್ತಿದೆ. ನಾನು ಪೂಜಾರಿ ಅಷ್ಟೆ, ಜನ ಹೇಳಿದ್ದು ದೇವರಿಗೆ ತಲುಪಿಸುತ್ತೇನೆ. ದೇವರು ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲ ಶಾಸಕರು ಚೆನ್ನಾಗಿ ಕೆಲಸ ಮಾಡಿದ್ದಾರೆ. ಆದರೆ ಇದೇ ವೇಳೆ ಹಾಲಿ ಶಾಸಕರಿಗೆ ಟಿಕೆಟ್ ಕೈ ತಪ್ಪುವ ಬಗ್ಗೆ ಕೇಳಿದಾಗ ಡಿಕೆಶಿ ಉತ್ತರಿಸಲಿಲ್ಲ. ನನಗೆ ಯಾವುದೇ ಒತ್ತಡ ಇಲ್ಲ. ಮೂರು ವರ್ಷದಿಂದ ಪಕ್ಷ ಕಟ್ಟಿದ್ದೀವಿ. ಯಾರು ಕೆಲಸ ಮಾಡಿದ್ದಾರೆ ಗೊತ್ತಿದೆ. 1150 ಜನ ಅರ್ಜಿ ಹಾಕಿದ್ದಾರೆ. ಎಲ್ಲರಿಗೂ ಶಾಸಕರಾಗುವ ಆಸೆ ಇದೆ. ಟಿಕೆಟ್ ಸಿಗದಿದ್ದರೆ ಪರಿಷತ್ ನಲ್ಲಿ ಅವಕಾಶ ನೀಡಲಾಗುವುದು. ಕಷ್ಟ ಪಟ್ಟವರಿಗೆ ಬೇರೆ ಬೇರೆ ಸ್ಥಾನ ಮಾನ ನೀಡಲಾಗುವುದು. ನಾವು ಈಗಾಗಲೇ ಐದಾರು ಮೀಟಿಂಗ್ ಮಾಡಿದೆ. ಹಲವು ಸರ್ವೆಗಳನ್ನು ಮಾಡಿಸಿದೆ. ಎಲ್ಲವೂ ಆಧರಿಸಿ ನಿರ್ಧಾರಕ್ಕೆ ಬರ್ತೀವಿ ಎಂದು ಹೇಳಿದರು.

## ಟಿಪ್ಪು ಕೊಂದಿದ್ದು ಉರಿಗೌಡ, ನಂಜೇಗೌಡ ಎಂಬುದು ಐತಿಹಾಸಿಕ ಸತ್ಯ: ಸಿ.ಟಿ ರವಿ



ಧಾರವಾಡ: ಟಿಪ್ಪು ಕೊಂದಿದ್ದು ಉರಿಗೌಡ, ನಂಜೇಗೌಡ ಎಂಬುದು ಐತಿಹಾಸಿಕ ಸತ್ಯ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಹೇಳಿದ್ದಾರೆ. ಧಾರವಾಡ ಜಿಲ್ಲೆಯ ಕುಂದಗೋಳದಲ್ಲಿ ಮಾತನಾಡಿದ ಶಾಸಕ ಸಿ..ಟಿ.ರವಿ, ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು. ಟಿಪ್ಪು ಬದುಕಿದ್ದರೆ ಕೈಮಾಬಾದ್ ಎಂದು ಕರೆಯೋಕೆ ಹೆಚ್.ಡಿ.ಕೆಗೆ ಇಷ್ಟ. ಕುಮಾರಸ್ವಾಮಿಗೆ ಹಾಸನವನ್ನು ಕೈಮಾಬಾದ್ ಎಂದು ಕರೆಯೋಕೆ ಇಷ್ಟ ಎಂದಿದ್ದಾರೆ. ರಾಜ್ಯದ 140ಕ್ಕೂ ಹೆಚ್ಚು ವಿಧಾನಸಭಾ ಕ್ಷೇತ್ರದಲ್ಲಿ ರಥಯಾತ್ರೆ ಮಾಡಿದ್ದೇವೆ, ವಿಜಯಸಂಕಲ್ಪ ಯಾತ್ರೆಯಲ್ಲಿ ಅಭೂತಪೂರ್ವ ಜನಬೆಂಬಲ ಸಿಕ್ಕಿದೆ. ಬಿಜೆಪಿ ಅತಿ ಹೆಚ್ಚು ಸೀಟ್ ಗೆದ್ದು ಕರ್ನಾಟಕದಲ್ಲಿ ಅಧಿಕಾರಕ್ಕೆ ಬರುತ್ತೆ, ಕೆಲವರಿಗೆ ವೋಟ್ ಮೊದಲು ಆದರೆ ನಮಗೆ ರಾಷ್ಟ್ರ ಮೊದಲು ಎಂದು ಬಿಜೆಪಿ ಶಾಸಕ ಸಿ.ಟಿ ರವಿ ಹೇಳಿದ್ದಾರೆ. ಅಭಿವೃದ್ಧಿಯಲ್ಲಿ ಯಾರೂ ನಮ್ಮನ್ನ ಹಿಂದೆ ಹಾಕುವುದಕ್ಕೆ ಆಗುವುದಿಲ್ಲ. ಪ್ರತಿ ಕ್ಷೇತ್ರದಲ್ಲಿ ಶೇ.70 ರಿಂದ 80 ರಷ್ಟು ಸರ್ಕಾರದ ಫಲಾನುಭವಿಗಳಿದ್ದಾರೆ. ಫಲಾನುಭವಿಗಳಷ್ಟೇ ಮತ ಹಾಕಿದ್ರೆ ಸಾಕು ಕಾಂಗ್ರೆಸ್ ಠೇವಣಿ ಕಳೆದುಕೊಳ್ಳುತ್ತದೆ ಎಂದಿದ್ದಾರೆ. ನಾವು ಸರ್ಕಾರದ ಅಭಿವೃದ್ಧಿ ರಿಪೋರ್ಟ್ ಕಾರ್ಡ್ ಜನರ ಮುಂದೆ ಇಟ್ಟಿದ್ದೇವೆ. ಜೊತೆಗೆ ಪಕ್ಷದ ಸಿದ್ಧಾಂತ ಮತ್ತು ಬದ್ಧತೆ ಮುಂದಿಟ್ಟು ಬಹುಮತ ಕೇಳ್ತಿದ್ದೇವೆ. ನಾವು ಯಾವುದೇ ಜಾತಿ ತಾರತಮ್ಯ ಮಾಡದೆ ಯೋಜನೆ ತಲುಪಿಸಿದ್ದೇವೆ. ಯಾವತ್ತೋ ಸಾಲ ಮನ್ನಾ ಮಾಡಿರೋದನ್ನೆ ಇಂದಿಗೂ ಕೆಲವರು ಹೇಳುತ್ತಿದ್ದಾರೆ ಎಂದು ಸಿಟಿ ರವಿ ಪರೋಕ್ಷವಾಗಿ ಕಾಂಗ್ರೆಸ್ ವಿರುದ್ಧ ವ್ಯಂಗ್ಯವಾಡಿದ್ದಾರೆ. ಕಳಸಾ ಬಂಡೂರಿ ಯೋಜನೆಗೆ 1000 ಕೋಟಿ ತಗೆದಿಟ್ಟಿದ್ದೇವೆ. ಒಂದು ಕಾಲದಲ್ಲಿ ನಾವು ಕಳಸಾ ಬಂಡೂರಿಗಾಗಿ ಹೋರಾಟ ಮಾಡಿದ್ವಿ. ಅಧಿಕಾರಕ್ಕೆ ಬಂದ ಮೇಲೆ ಸುಮ್ಮನೆ ಕೂರಲಿಲ್ಲ. ನಮ್ಮ ಬದ್ಧತೆ ತೋರಿಸಿ ಆಕಖ ಗೆ ಅನುಮತಿ ತರುವಲ್ಲಿ ಯಶಸ್ವಿಯಾಗಿದ್ದೇವೆ ಎಂದು ಹೆಮ್ಮೆ ವ್ಯಕ್ತಪಡಿಸಿದರು.

## ಹೆಚ್ಚಿದ ಕೋವಿಡ್ ಆತಂಕ: ದೇಶದಲ್ಲಿಂದು 796 ಹೊಸ ಪ್ರಕರಣಗಳು ಪತ್ತೆ



ನವದೆಹಲಿ: ಭಾರತದಲ್ಲಿ ಶುಕ್ರವಾರ 796 ಹೊಸ ಕೋವಿಡ್ ಪ್ರಕರಣಗಳು ಪತ್ತೆಯಾಗಿದ್ದು, ಇದು 4 ತಿಂಗಳ ದಾಖಲೆಯಾಗಿದೆ. ಕಳೆದ 24 ಗಂಟೆಗಳಲ್ಲಿ 5 ಮಂದಿ ಸಾವನ್ನಪ್ಪಿರುವುದು ವರದಿಯಾಗಿದೆ.

ಇದರೊಂದಿಗೆ ದೇಶದಲ್ಲಿ ಕೋವಿಡ್ ಪ್ರಕರಣಗಳ ಒಟ್ಟು ಸಂಖ್ಯೆ 4,46,93,506ಕ್ಕೆ ಏರಿಕೆಯಾಗಿದೆ. ಅಲ್ಲದೇ, ಕೋವಿಡ್ ನಿಂದ ಸಾವನ್ನಪ್ಪಿರುವವರ ಒಟ್ಟು ಸಂಖ್ಯೆ 5,30,795ಕ್ಕೆ ಏರಿಕೆಯಾಗಿದೆ.

ದೇಶದಲ್ಲಿ ಸೋಂಕಿತರ ಸಂಖ್ಯೆ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಸಕ್ರಿಯ ಪ್ರಕರಣಗಳ ಸಂಖ್ಯೆ 5,026ಕ್ಕೆ ತಲುಪಿದೆ. ಈ ನಡುವೆ ಒಟ್ಟು ಚೇತರಿಸಿಕೊಂಡವರ ಸಂಖ್ಯೆ 4,41,57,685ಕ್ಕೆ ತಲುಪಿದೆ.

ಇನ್ನು ಭಾರತದಲ್ಲಿ ಒಂದೇ 98,727 ಮಂದಿಯನ್ನು ಕೊರೋನಾ ಪರೀಕ್ಷೆಗೊಳಪಡಿಸಲಾಗಿದ್ದು, ಈವರೆಗೂ 92,01,11,661 ಮಂದಿಯನ್ನು ಪರೀಕ್ಷೆಗೊಳಪಡಿಸಲಾಗಿದೆ ಎಂದು ಐಸಿಎಂಆರ್ ಮಾಹಿತಿ ನೀಡಿದೆ.

## ತಂಬಾಕು ನಿಯಂತ್ರಣ; ಬೆಂಗಳೂರಿಗೆ ಜಾಗತಿಕ ಪ್ರಶಸ್ತಿ: ಬಿಬಿಎಂಪಿಗೆ ಸಚಿವ ಸುಧಾಕರ್ ಅಭಿನಂದನೆ

ಬೆಂಗಳೂರು: ಸಾರ್ವಜನಿಕವಾಗಿ ಧೂಮಪಾನ ಕಡಿಮೆ ಮಾಡಲು ಮತ್ತು ಆ ಮೂಲಕ ಸಾಂಕ್ರಾಮಿಕವಲ್ಲದ ರೋಗಗಳ (ಎನ್‌ಸಿಡಿ) ಹೊರೆಯನ್ನು ಗಣನೀಯವಾಗಿ ಕಡಿಮೆ ಮಾಡುವ ನಿಟ್ಟಿನಲ್ಲಿ ಶ್ರಮಿಸಿದ ಬೆಂಗಳೂರು ಪ್ರತಿಷ್ಠಿತ ಪ್ರಶಸ್ತಿಯೊಂದನ್ನು ಬಾಚಿಕೊಂಡಿದೆ.

ಉದ್ಯಾನ ನಗರಿ, ಐಟಿ ಹಬ್ ಆಗಿರುವ ಬೆಂಗಳೂರು, ಧೂಮಪಾನ-ಮುಕ್ತ ಕಾನೂನುಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿದ ಹಿನ್ನೆಲೆಯಲ್ಲಿ ಜಾಗತಿಕ ಮಟ್ಟದಲ್ಲಿ ನೀಡಲ್ಪಡುವ 'ಆರೋಗ್ಯಕರ ನಗರಗಳ ಶೃಂಗಸಭೆ ಪ್ರಶಸ್ತಿ-2023'ಯನ್ನು ಪಡೆದುಕೊಂಡಿದೆ.

ಮಾರ್ಚ್ 15 ರಂದು ಲಂಡನ್‌ನಲ್ಲಿ ನಡೆದ ಆರೋಗ್ಯಕರ ನಗರಗಳ ಶೃಂಗಸಭೆಗೆ ನಿಯೋಗದ ನೇತೃತ್ವ ವಹಿಸಿದ್ದ ಬಿಬಿಎಂಪಿ ವಿಶೇಷ ಆಯುಕ್ತ (ಆರೋಗ್ಯ) ಡಾ.ತ್ರಿಲೋಕ್ ಚಂದ್ರ ಅವರು ಪ್ರಶಸ್ತಿ ಸ್ವೀಕರಿಸಿದರು.



ಈ ಪ್ರಶಸ್ತಿ ನಮ್ಮ ಬಿಬಿಎಂಪಿ ಆರೋಗ್ಯ ವಿಭಾಗದ ತಂಡ, ನಾಗರಿಕ ಸಮಾಜ ಸಂಸ್ಥೆಗಳು ಮತ್ತು ನಿವಾಸಿಗಳ ಶ್ರಮ ಮತ್ತು ಸಮರ್ಪಣೆಗೆ ಸಾಕ್ಷಿಯಾಗಿದೆ ಎಂದು ತ್ರಿಲೋಕ್ ಚಂದ್ರ ಅವರು ಹೇಳಿದರು.

ಧೂಮಪಾನ-ಮುಕ್ತ ಬೆಂಗಳೂರಿನ ಕೇಂದ್ರೀಕೃತ ಪ್ರಯತ್ನದ ಫಲವಾಗಿ ಸಾರ್ವಜನಿಕ ಸ್ಥಳದಲ್ಲಿ ಧೂಮಪಾನದ ಪ್ರಮಾಣ ಶೇ. 5.2 ರಷ್ಟು ಕಡಿಮೆ ಮಾಡಿದೆ (2017 ರಲ್ಲಿ ಶೇ,18.18, 2021 ರಲ್ಲಿ ಶೇ.13.30 ರಷ್ಟು ಕಡಿಮೆಯಾಗಿತ್ತು) ಇದಷ್ಟೇ ಅಲ್ಲದೆ, ನೋ ಸ್ಮೋಕಿಂಗ್ ಬೋರ್ಡ್ ಪ್ರದರ್ಶನವು ಶೇ. 51.9 ರಷ್ಟು ಹೆಚ್ಚಳವಾಗಿದೆ. ಧೂಮಪಾನ ನಿಷೇಧ ಚಿಹ್ನೆಯ ಪ್ರದರ್ಶನದಲ್ಲಿ ಶೇ.51.9ರಷ್ಟು ಹೆಚ್ಚಳವಾಗಿದೆ ಅಂದರೆ 2017 ರಲ್ಲಿ ಶೇಕಡಾ 23.1ರಷ್ಟಿತ್ತು, ಅದು 2021ರವರೆಗೆ ಶೇಕಡಾ 75 ಹೆಚ್ಚಾಗಿದೆ ಎಂದರು ಎಂತು ತಿಳಿಸಿದರು.

ಸಿಲಿಕಾನ್ ಸಿಟಿ ಆರೋಗ್ಯಕರ ಜೀವನಶೈಲಿಯನ್ನು ಉತ್ತೇಜಿಸುವಲ್ಲಿ ಮತ್ತು ನಮ್ಮ ಸಮುದಾಯದ ಒಟ್ಟಾರೆ ಯೋಗಕ್ಷೇಮವನ್ನು ಸುಧಾರಿಸುವಲ್ಲಿ ಅಗ್ರಸ್ಥಾನ ಪಡೆದುಕೊಂಡಿದೆ. ಭವಿಷ್ಯದಲ್ಲಿ ಇನ್ನಷ್ಟು ಆರೋಗ್ಯ ಮತ್ತು ಕ್ಷೇಮ ಉಪಕ್ರಮಗಳಿಗೆ ಆದ್ಯತೆ ನೀಡಲಿದ್ದೇವೆ ಎಂದರು.

ವೈಟಲ್ ಸ್ಟ್ರಾಟಜೀಸ್ ಅಡಿಯಲ್ಲಿ ಆರೋಗ್ಯಕರ ನಗರಗಳ ಕಾರ್ಯವನ್ನು ಮುನ್ನಡೆಸುತ್ತಿರುವ ಯೋಜನಾ ನಿರ್ದೇಶಕಿ ಡಾ ತ್ರಿವೇಣಿ ಬಿಎಸ್ ಅವರು ಮಾತನಾಡಿ, "ತಂಬಾಕು ನಿಯಂತ್ರಣ ಕಾನೂನುಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಮೂಲಕ ಬೆಂಗಳೂರನ್ನು ಹೊಗೆ ಮುಕ್ತ ನಗರವನ್ನಾಗಿ ಮಾಡಲು ಬಿಬಿಎಂಪಿಯ ಬದ್ಧತೆವಾಗಿದೆ. ಈ ಪ್ರಶಸ್ತಿಯು ಯುವಕರು ತಂಬಾಕಿಗೆ ವ್ಯಸನಿಯಾಗುವುದನ್ನು ತಡೆಯಲು ಹೊಸ ತಂಬಾಕು ನಿಯಂತ್ರಣ ನಿಯಮಗಳು ಮತ್ತು ನಿಬಂಧನೆಗಳನ್ನು ತರಲು ಮತ್ತಷ್ಟು ಪ್ರೇರಣೆ ನೀಡಲಿದೆ ಎಂದು ಹೇಳಿದರು.

**ಬಿಬಿಎಂಪಿಗೆ ಅಭಿನಂದನೆ ತಿಳಿಸಿದ ಆರೋಗ್ಯ ಸಚಿವ ಸುಧಾಕರ್**

ತಂಬಾಕು ನಿಯಂತ್ರಿಸುವಲ್ಲಿ ಅತ್ಯುನ್ನತ ಪ್ರಶಸ್ತಿ ಪಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ಆರೋಗ್ಯ ಸಚಿವ ಡಾಕೆ.ಸುಧಾಕರ್ ಅವರು ಅಭಿನಂದಿಸಿದ್ದಾರೆ.

# ಲೋಕೋಪಯೋಗಿ ಇಲಾಖೆ ಜಪ್ತಿ: ಕಚೇರಿ ಸಾಮಾಗ್ರಿ ಎತ್ತಂಗಡಿ

ಬಳ್ಳಾರಿ : ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ 2008–2009ರಲ್ಲಿ ರಸ್ತೆ ಅಭಿವೃದ್ಧಿ ಮಾಡಲು ಸಂಗನಕಲ್ಲು, ಎರ್ರಗುಡಿ, ಮೋಕ ಗ್ರಾಮದ ರೈತರು ಭೂಮಿಯನ್ನು ತೆಗೆದುಕೊಂಡು, ಸುಮಾರು 17 ವರ್ಷಗಳಿಂದ ರೈತರಿಗೆ ಹಣವನ್ನು ನೀಡದೇ ವಂಚಿಸಲಾಗಿದೆ.

ಹಲವಾರು ಬಾರಿ ಸಚಿವರಿಗೆ ಮತ್ತು ಅಧಿಕಾರಿಗಳಿಗೆ ಮಾತ್ರ ಮನವಿ ಪತ್ರ ಸಲ್ಲಿಸಿದರೂ ಗಮನ ಹರಿಸಿಲ್ಲದಿರುವುದು ಶೋಚನೀಯ. ಸುಮಾರು ವರ್ಷಗಳದಿಂದ ನೂರಾರು ರೈತರು ನ್ಯಾಯಾಲಯದದಲ್ಲಿ ಹೋರಾಟ ಮಾಡುತ್ತಾ ಬಂದಿದ್ದಾರೆ. ಆದರೆ ಶುಕ್ರವಾರದಂದು ಜಿಲ್ಲಾ ನ್ಯಾಯಧೀಶರು



ಮತ್ತು ಸಿವಿಲ್ ನ್ಯಾಯಧೀಶರು ಸೇರಿಕೊಂಡು ಕೋಟೆ ಪ್ರದೇಶದಲ್ಲಿರುವ ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಅವರ ಕಚೇರಿಯನ್ನು ಜಪ್ತಿ ಮಾಡುವಂತೆ ಆದೇಶ ಮಾಡಿದೆ. ನ್ಯಾಯಾಲಯ ಆದೇಶ ಮಾಡಿದ ಹಿನ್ನೆಲೆಯಲ್ಲಿ ವಕೀಲರು ಮತ್ತು ನೂರಾರು ರೈತರು ಸೇರಿ ಕಂಪ್ಯೂಟರ್, ಅಧಿಕಾರಿಗಳ ಕುರ್ಚಿಗಳು ಮುಂತಾದ ಸಾಮಾಗ್ರಿಗಳು ಟ್ರಾಕ್ಟರ್ ಮೂಲಕ ರೈತರು ನ್ಯಾಯಾಲಯಕ್ಕೆ ಶಿಫ್ಟ್ ಮಾಡಿದರು. ನ್ಯಾಯಾಲಯ ವ್ಯಾಪ್ತಿಗೆ ಸುಪರ್ದಿಗೆ ತೆಗೆದುಕೊಂಡಿದೆ.

ಬಳ್ಳಾರಿಗೆ ಸಚಿವ ಸಿಸಿ ಪಾಟೀಲ್ ಬಂದಾಗಲೂ ರೈತರು ಮನವಿ ಪತ್ರ ಸಲ್ಲಿಸಿದರೂ ಕೂಡಾ ಯಾವುದೇ ಸರ್ಕಾರಗಳಾಗಲಿ, ಜನಪ್ರತಿನಿಧಿಗಳಾಗಲಿ ರೈತರ ಗೋಳು ಕಣ್ಣಿಗೆ ಬೀಳದೇ ಇರುವುದು ದುರಂತವೇ ಸರಿ.

ವಿಧಾನಸಭೆಯಲ್ಲಿ ಸೇರಿದಂತೆ ಮತ್ತಿತರೇ ಜನಪ್ರತಿನಿಧಿಗಳೂ ಹಸಿರು ಶಾಲು ಹಾಕಿಕೊಂಡು ಪ್ರಮಾಣ ವಚನ ಸ್ವೀಕರಿಸುತ್ತಾರೆ ಹೊರತು ರೈತರ ವಿಚಾರದಲ್ಲಿ ಯಾವುದೇ ನ್ಯಾಯ ಉಳಿಸುವಂತಹ ಕೆಲಸ ಶಾಸಕರಾಗಲಿ ಮತ್ತು ಸಚಿವರಾಗಲಿ ಮಾಡಿಲ್ಲ. ಹೀಗಾಗಿ ಮೋಕ, ಸಂಗನಕಲ್ಲು, ಎರ್ರಗುಡಿ, ಮೋಕ ರೈತರ ಗೋಳಾದರೆ, ರಾಜ್ಯದ ವಿವಿಧೆಡೆ ರೈತರ ಭೂಮಿಯನ್ನು ಪಡೆದು ಪರಿಹಾರ ನೀಡದೇ ವಂಚನೆ ಮಾಡುತ್ತಿರುವುದು ಶೋಚಿಗದ ಸಂಗತಿಯಾಗಿದೆ.

# ಸೂರು ಒದಗಿಸುವ ಕಾರ್ಯದಲ್ಲಿ ಬಿಜೆಪಿ ಸರ್ಕಾರ ಸನ್ನದ್ಧ: ಪುರಂಧೇಶ್ವರಿ



ಬಳ್ಳಾರಿ : ರಾಜ್ಯ ಬಿಜೆಪಿ ನೇತೃತ್ವದ ಸರ್ಕಾರ ಕಮರ್ಷಿಯಲ್ ರಾಜಧಾನಿ ಬಳ್ಳಾರಿ ಜಿಲ್ಲೆಯಲ್ಲಿ ಅಭಿವೃದ್ಧಿ ಪರ್ವ ಹರಿಸಿದೆ ಎಂದು ಭಾರತೀಯ ಜನತಾ ಪಾರ್ಟಿ ರಾಷ್ಟ್ರೀಯ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿ ಪುರಂಧೇಶ್ವರಿ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ನಗರದ ಬಸವ ಭವನದಲ್ಲಿ ಬಿಜೆಪಿ ಮಹಿಳಾ ಮೋರ್ಚಾಸಭೆಯಲ್ಲಿ ಪಾಲ್ಗೊಳ್ಳಲು ಬಳ್ಳಾರಿಗೆ ಆಗಮಿಸಿದ್ದ ಅವರು ವಾಜಪೇಯಿ ಬಡಾಬಣೆಯ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರದಲ್ಲಿ ಮೋದಿ ಅವರು ದೇಶವಾಸಿಗಳ, ಯುವ ಜನತೆಯ ಅದರಲ್ಲೂ ವಿಶೇಷವಾಗಿ ಮಹಿಳೆಯರ ಸಬಲೀಕರಣಕ್ಕೆ ಸಾಕಷ್ಟು ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿದ್ದಾರೆ. ಅದೇರೀತಿ, ಕರ್ನಾಟಕದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಹ ನಾಡಿನ ಅಭಿವೃದ್ಧಿಗೆ ಬದ್ಧರಾಗಿದ್ದಾರೆ. ಈಗಾಗಲೇ ರಾಜ್ಯದಲ್ಲಿ ನಿರ್ಮಾಣಗೊಂಡಿರುವ ಹದಿನೈದು ಲಕ್ಷ ಮನೆಗಳ ಹಂಚಿಕೆ ಕಾರ್ಯ ನಡೆದಿದೆ.

ಕೆಲವೊಂದು ತಾಂತ್ರಿಕ ಕಾರಣಗಳಿಂದ ಇನ್ನು ಕೆಲವರಿಗೆ ಮನೆಗಳನ್ನು ವಿತರಿಸಲಾಗಿಲ್ಲ. ಎಲ್ಲರಿಗೂ ಸೂರು ಒದಗಿಸುವ ಕಾರ್ಯದಲ್ಲಿ ಬಿಜೆಪಿ ಸರ್ಕಾರ ಸನ್ನದ್ಧವಾಗಿದೆ ಎಂದರು. ಕೇಂದ್ರ ಸರ್ಕಾರ ಜಿಲ್ಲಾ ಖನಿಜ ಯೋಜನೆ ಯಡಿ 24 ಸಾವಿರ ಕೋಟಿ ಹಣ ವಿನಿಯೋಗಿಸಿ ಅಭಿವೃದ್ಧಿ ಗೆ ಶ್ರಮಿಸುತ್ತಿದೆ. ನಗರದಲ್ಲಿ ಈಗಾಗಲೇ 13 ಸಾವಿರ ಜನರಿಗೆ ಹಕ್ಕುಪತ್ರಗಳನ್ನು ವಿತರಿಸಿದ್ದಾರೆ ಎಂದ ಅವರು ಕೇಂದ್ರ ಹಾಗು ರಾಜ್ಯ ಸರ್ಕಾರಗಳ ಸಾಧನೆಗಳ ಮೆಲುಕು ಹಾಕಿದರು.

ಇನ್ನು ಚುನಾವಣೆ ಸಮೀಪಿಸುತ್ತಿರುವುದರಿಂದ ಸಹಜವಾಗಿ ಟಿಕೆಟ್ ಆಕಾಂಕ್ಷಿಗಳ ಪಟ್ಟಿ ಪರಿಶೀಲಿಸಿ ಪಕ್ಷದ ನಾಯಕರು ಯಾರಿಗೆ ಟಿಕೆಟ್ ನೀಡಬೇಕೆನ್ನುವುದನ್ನು ನಿರ್ಧಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಮುರಾರಿಗೌಡ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಸುಗುಣಾ, ಶಿವಕೃಷ್ಣಮ್ಮ, ಶರಣಮ್ಮ, ವಿಜಯಲಕ್ಷ್ಮಿ,ಕರೂರು, ಜೆ.ಶಾಂತಾ, ಪಾರ್ವತಿ ಇಂದುಶೇಖರ್, ಸಾಧನಾ ಹಿರೇಮಠ, ಡಾ.ಅರುಣಾ ಕಾಮಿನೇನಿ, ಮುಖಂಡರಾದ ಡಾ.ಬಿಕೆ ಸುಂದರ್, ಕೆಎ ರಾಮಲಿಂಗಪ್ಪ ಇನ್ನಿತರರು ಇದ್ದರು.

# ಕಾನಿಪ ಸಂಘದ ಪತ್ರಕರ್ತರಿಗೆ ವಿಮೆ ಸೌಲಭ್ಯ ಕಾರ್ಡ್ ವಿತರಿಸಿದ ಅಧ್ಯಕ್ಷ ಯಾಳ್ಪಿ ವಲಿಭಾಷ



ಬಳ್ಳಾರಿ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಯಾಳ್ಪಿ ವಲಿಭಾಷಾ ಅವರು ನೀಡಿದ ಭರವಸೆಯಂತೆ ಶುಕ್ರವಾರ ಕಾನಿಪ ಸಂಘದ ಸದಸ್ಯರಿಗೆ ಅಂಚೆ ಇಲಾಖೆಯಡಿ ವಿಮೆ ಸೌಲಭ್ಯವನ್ನು ಕಲ್ಪಿಸಿ, ಕೊಟ್ಟ ಮಾತನ್ನು ಈಡೇರಿಸಿದರು. ಬಹುತೇಕ ಪತ್ರಕರ್ತರು ವಿಮೆ ಕಾರ್ಡ್ ಗಳನ್ನು ಮಾಡಿಸಿಕೊಳ್ಳುವ ಮೂಲಕ ಸಂತಸ ವ್ಯಕ್ತಪಡಿಸಿದರು. ಅಂಚೆ ಇಲಾಖೆ ಸಿಬ್ಬಂದಿಗಳಾದ ಎಸ್.ಎಂ.ಶಾಂತಾ ಅವರು ನಗರದ ಪತ್ರಿಕಾ ಭವನದಲ್ಲಿ ಪತ್ರಕರ್ತರ ಎಲ್ಲ ಮಾಹಿತಿಗಳನ್ನು ಪಡೆದು ಆನ್ ಲೈನ್ ಮೂಲಕ ವಿಮೆ ಸೌಲಭ್ಯವನ್ನು ಕಲ್ಪಿಸಿದರು.

ಈ ಸಂದರ್ಭದಲ್ಲಿ ವಾರ್ತಾ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರಾದ ಧನಂಜಯಪ್ಪ ಅವರು, ಕಾನಿಪ ಪತ್ರಕರ್ತರ ಸಂಘದ ಅಧ್ಯಕ್ಷ ಯಾಳ್ಪಿ ವಲಿಭಾಷಾ ಅವರ ನೇತೃತ್ವದಲ್ಲಿ ಪತ್ರಕರ್ತರಿಗೆ ವಿಮೆ ಕಾರ್ಡ್ ಗಳನ್ನು ವಿತರಿಸಿದರು. ಈ ಸಂದರ್ಭದಲ್ಲಿ ಕಾನಿಪ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿ.ರವಿ, ಉಪಾಧ್ಯಕ್ಷರಾದ ಬಜಾರಪ್ಪ, ಮಲ್ಲಯ್ಯ, ಗುರುಶಾಂತ್, ಕಾರ್ಯದರ್ಶಿ ರಘುರಾಮ್, ಕಾರ್ಯಕಾರಿ ಸಮೀತಿ ಸದಸ್ಯರಾದ ಪಂಪನಗೌಡ, ಎಂ.ಜಂಬುನಾಥ್, ವೆಂಕಟೇಶ ದೇಸಾಯಿ, ಎಂ.ಇ.ಜೋಶಿ, ಶ್ರೀನಿವಾಸಲು, ಮಲ್ಲಿಕಾರ್ಜುನ ಸೇರಿದಂತೆ ಪತ್ರಕರ್ತರು ಉಪಸ್ಥಿತರಿದ್ದರು.

# ಮೇಯರ್ ರಾಜೇಶ್ವರಿ ಅಧ್ಯಕ್ಷತೆಯಲ್ಲಿ ಪಾಲಿಕೆಯ ಸಾಮಾನ್ಯ ಸಭೆ




ಬಳ್ಳಾರಿ: ಬಳ್ಳಾರಿ ಮಹಾನಗರ ಪಾಲಿಕೆಯ ಸಾಮಾನ್ಯ ಸಭೆಯು ಶುಕ್ರವಾರದಂದು ಮಹಾಪೌರರಾದ ರಾಜೇಶ್ವರಿ ಸುಬ್ಬರಾಯುಡುರವರ ಅಧ್ಯಕ್ಷತೆಯಲ್ಲಿ ಜರುಗಿತು.

ಮಹಾನಗರ ಪಾಲಿಕೆಯ ಉಪ ಮಹಾಪೌರರು, ಎಲ್ಲಾ ಸ್ಥಾಯಿ ಸಮಿತಿ ಅಧ್ಯಕ್ಷರುಗಳು, ಪಾಲಿಕೆಯ ಎಲ್ಲಾ ಸದಸ್ಯರುಗಳು, ಆಯುಕ್ತರು, ಅಧಿಕಾರಿ ಸಿಬ್ಬಂದಿ ವರ್ಗದವರು ಹಾಜರಿದ್ದರು.ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಕಾರ್ಯಪಾಲಕ ಅಭಿಯಂತರರಾದ ಆರ್. ಎಸ್.ಖಾಜಾಮ್ಮೆನುದ್ದೀನ್‌ರವರು ಇದೇ ತಿಂಗಳು ವಯೋ ನಿವೃತ್ತಿ ಹೊಂದುತ್ತಿದ್ದು, ಅವರ ನಿವೃತ್ತಿ ಜೀವನ ಸುಖಕರವಾಗಿಲಿ ಎಂದು ಮಹಾಪೌರರು, ಉಪ–ಮಹಾಪೌರರು, ಎಲ್ಲಾ ಸ್ಥಾಯಿ ಸಮಿತಿ ಅಧ್ಯಕ್ಷರುಗಳು ಹಾಗೂ ಎಲ್ಲಾ ಸದಸ್ಯರುಗಳು ಶುಭವನ್ನು ಕೋರಿದರು.

# ಡಾ. ಜಿ.ಪರಮೇಶ್ವರ್ ಪ್ರತಿಕೃತಿ ದಹಿಸಿ ಪ್ರತಿಭಟನೆ



ಬಳ್ಳಾರಿ : ತುಮಕೂರು ಜಿಲ್ಲೆಯ ಕೊರಟಗೆರೆ ವಿಧಾನ ಸಭಾ ಕ್ಷೇತ್ರದ ಸಮಾವೇಶವೊಂದರಲ್ಲಿ ಮಾಜಿ ಉಪ ಮುಖ್ಯಮಂತ್ರಿ ಜಿ.ಪರಮೇಶ್ವರ್‌ರವರು ಬಿಜೆಪಿ ಪಕ್ಷದ ಪ್ರಬಲ ಅಕಾಂಕ್ಷಿಯಾಗಿರುವ ನಿವೃತ್ತ ಐಎಎಸ್ ಅಧಿಕಾರಿಯಾದ ಬಿ.ಹೆಚ್.ಅನಿಲ್ ಕುಮಾರ್‌ರ ವಿರುದ್ಧ ಅವಹೇಳನಕಾರಿಯಾಗಿ ಹೇಳಿಕೆ ನೀಡಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಡಾ॥ಬಾಬು ಜಗಜೀವನ್ ರಾಮ್ ಜನ ಜಾಗೃತಿ ವೇದಿಕೆಯ ರಾಜ್ಯ ಮತ್ತು ಜಿಲ್ಲಾ ಘಟಕದ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು.

ನಗರದ ನಾರಾಯಣ್ ರಾವ್ ಪಾರ್ಕ್ನಿಂದ ಮೆರವಣಿಗೆ ಮುಖಾಂತರ ಆಗಮಿಸಿ ರಾಯಲ್ ವೃತ್ತದಲ್ಲಿ ಪ್ರತಿಕೃತಿ ದಹಿಸಿ ಡಾ॥ಜಿ.ಪರಮೇಶ್ವರ್ ವಿರುದ್ಧ ಪ್ರತಿಭಟನಾಕಾರು ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಡಾ॥ಬಾಬು ಜಗಜೀವನ್ ರಾಮ್ ಜನ ಜಾಗೃತಿ ವೇದಿಕೆಯ ರಾಜ್ಯ ಘಟಕದ ಅಧ್ಯಕ್ಷ ಟಿ.ಪಂಪಾಪತಿ ಸುಮಾರು ವರ್ಷಗಳಿಂದ ಹೊಲೆ ಮಾದಿಗರ ಹೆಸರೇಳಿಕೊಂಡು ರಾಜಕೀಯವಾಗಿ ಉನ್ನತ ಹುದ್ದೆಗಳನ್ನು ಪಡೆದುಕೊಂಡು ಐಷಾರಾಮಿ ಜೀವನ ಸಾಗಿಸುತ್ತಿರುವ ಮಲ್ಲಿಕಾರ್ಜುನ ಖರ್ಗೆ, ಡಾ॥ ಜಿ.ಪರಮೇಶ್ವರ್, ಹೆಚ್.ಸಿ.ಮಹಾದೇವಪ್ಪ, ಶ್ರೀನಿವಾಸ್ ಪ್ರಸಾದ್, ಮೋಟಮ್ಮ, ನರೇಂದ್ರಸ್ವಾಮಿ ಇನ್ನಿತರರು ಹೊಲೆ ಮಾದಿಗರ ಒಳಮೀಸಲಾತಿಗೆ ನ್ಯಾಯ ಕೊಡಿಸದೇ ಸದಾಶಿವ ಆಯೋಗದ ವರದಿ ಬಗ್ಗೆ ಸದನದಲ್ಲಿ ಚರ್ಚೆ ಮಾಡದೇ ವಿರೋಧ ಮಾಡಿ 25 ವರ್ಷಗಳಿಂದ ನ್ಯಾಯ ಮೂರ್ತಿ ಸದಾಶಿವ ಆಯೋಗದ ವರದಿ ಅನುಷ್ಠಾನಕ್ಕೆ ಅಡ್ಡಿಪಡಿಸಿ ನಮ್ಮ ಹೊಲೆ ಮಾದಿಗರಿಗೆ ಅನ್ಯಾಯ ಮಾಡಿದ್ದಾರೆಂದು ಹೇಳಿದರಲ್ಲದೇ ಇದು ಪ್ರಜಾಪ್ರಭುತ್ವ ಇಲ್ಲಿ ಯಾರು ಎಲ್ಲಿ ಬೇಕಾದರು ಚುನಾವಣೆಗೆ ನಿಲ್ಲಬಹುದು.

ಆದರೆ ಕೊರಟಗೆರೆ ವಿಧಾನ ಸಭಾ ಕ್ಷೇತ್ರದ ಬಿಜೆಪಿ ಅಕಾಂಕ್ಷಿಯಾಗಿರುವ ನಿವೃತ್ತ ಐಎಎಸ್ ಅಧಿಕಾರಿಯಾದ ಬಿ.ಹೆಚ್.ಅನಿಲ್ ಕುಮಾರ್ ರವರ ವಿರುದ್ಧ ಅವಹೇಳನಕಾಯಿರಿಯಾಗಿ ಮಾತನಾಡಿದ್ದನ್ನು ಖಂಡಿಸಿದರು. ಈ ಸಂದರ್ಭದಲ್ಲಿ ರಾಜ್ಯಾದ್ಯಕ್ಷರಾದ ಟಿ.ಪಂಪಾಪತಿ, ಜಿಲ್ಲಾದ್ಯಕ್ಷರಾದ ಹೆಚ್.ಕೆಂಚಪ್ಪ, ಪದಾಧಿಕಾರಿಗಳಾದ ಹೆಚ್.ಭೀಮಲಿಂಗಪ್ಪ, ಹೆಚ್. ಎಸ್.ಗಾದಿಲಿಂಗಪ್ಪ, ಜೆ.ಮಲ್ಲಿಕಾರ್ಜುನ, ವೈ. ಅರುಣಾಚಲಂ, ಅನಿಲ್ ಕುಮಾರ್, ವೀರೇಶ್, ಎ.ಕೆ. ಮಲ್ಲಿಕಾರ್ಜುನ, ಬಾಪೂಜಿ ನಗರ ಕೃಷ್ಣ, ಭೀಮಾದಾಸು, ಮುಕ್ಕಣ್ಣ, ಎಸ್.ಪ್ರಸಾದ್, ಹೆಚ್.ಗೋವಿಂದರಾಜುಲು, ರಾಮಚಂದ್ರ, ಗಾದಿಲಿಂಗ, ಹೆಚ್.ಸುರೇಶ್, ಚಂದ್ರಶೇಖರ್ ಕುಮಾರ್ ರಾಮಾಂಜನಿ ಇನ್ನಿತರರು ಭಾಗವಹಿಸಿದ್ದರು.

# ಕ್ರಿಕೆಟ್ ಪಂದ್ಯಾವಳಿಗಳಲ್ಲಿ ಆರ್.ವೈ.ಎಂ.ಇ ಮಹಾವಿದ್ಯಾಲಯದ ತಂಡಕ್ಕೆ ಅಂತಿಮ ಜಯ

ಬಳ್ಳಾರಿ : ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದ ತಂಡವು ದಿನಾಂಕ 11.03.2023 ರಿಂದ 16.03.2023ರವರೆಗೆ ಜರುಗಿದ "ವಿಶ್ವೇಶ್ವರಾಯತಾಂತ್ರಿಕ ವಿಶ್ವವಿದ್ಯಾಲಯುದಗುಲ್ಬರ್ಗಾಅಂತರ್ ವಲಯದಕ್ರಿಕೆಟ್ ಪಂದ್ಯಾವಳಿಗಳಲ್ಲಿ ಅಂತಿಮ ಪಂದ್ಯಾವಳಿಯಲ್ಲಿ ಅಂತಿಮ ಜಯ ಗಳಿಸಿತು. ಈ ಪಂದ್ಯಾವಳಿಗಳಲ್ಲಿ ಕಲಬುರ್ಗಿವಲಯದ ಒಟ್ಟು 14ತಂಡಗಳು ಭಾಗವಹಿಸಲು ಆಗಮಿಸಿದ್ದವು. ಫೈನಲ್ ಮ್ಯಾಚ್ ನಲ್ಲಿ , ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪತಾಂತ್ರಿಕ ಮಹಾವಿದ್ಯಾಲಯದ ತಂಡವು, ಮೊದಲು ಬ್ಯಾಟಿಂಗ್ ಮಾಡಲು ಆಯ್ಕೆ ಮಾಡಿತು ಹಾಗು ಬಳ್ಳಾರಿಯ ಬಿ.ಐ.ಟಿ.ಎಂ ಇಂಜನೀರಿಂಗ್‌ಕಾಲೇಜನ್ನು ಬೌಲಿಂಗ್ ಮಾಡಲು ಬಯಸಿತು.

ಬಹದ್ದೂರ್ ವೈ ಮಹಾಬಲೇಶ್ವರಪ್ಪತಾಂತ್ರಿಕ ಮಹಾವಿದ್ಯಾಲಯದತಂಡವು, ತಂಡವು 194 ರನ್ ಮಾಡಿದರೆ, ನಂತರ ಬ್ಯಾಟಿಂಗ್ ಮಾಡಿದ ಬಳ್ಳಾರಿಯ ಬಿ.ಐ.ಟಿ.ಎಂ



ಇಂಜನೀರಿಂಗ್‌ಕಾಲೇಜನ್ನು 153ರನ್ ಗಳಲ್ಲಿ ಆಲ್–ಔಟ್ ಆದರು. ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪತಾಂತ್ರಿಕ ಮಹಾವಿದ್ಯಾಲಯದತಂಡವು ಅಂತಿಮ ಜಯಗಳಿಸಿತು.ರಾವ್ ಬಹದ್ದೂರ್ ವೈ ಮಹಾಬಲೇಶ್ವರ ಪ್ಪತಾಂತ್ರಿಕ ಮಹಾವಿದ್ಯಾಲಯದ ತಂಡದಲ್ಲಿ ಇಮ್ಯಾನುಯಲ್ ಡಾನಿಯಲ್(ಕೆಪ್ಟನ್), ಶಿವಶಾಂತ್, ಇಬ್ರಹೀಂ, ತಿಲಕ್, ಅಭಿಷೇಕ್, ಸಂದೀಪ್, ಹರೀಷ್, ಚಂದ್ರಶೇಖರ್, ಅಜ್ಮಲ್, ಮಹೇಶ್, ಸಂಜಯ್ ಭರದ್ವಾಜ್, ರಂಜಿತ್, ಸಾಯಿಗಣೇಶ, ಪವನ್, ಮಂಜು, ಬಾಲಸುಬ್ರಮಣಿಯಮ್, ಯಶ್ವಂತ್, ಸಾಹಿತ್ಯವರ್ಮ, ಗಣೇಶ ಪಾಟೀಲ್, ಮಹಮ್ಮದ್ ವಲಿ, ಇವರು ಭಾಗವಹಿಸಿದ್ದರು.

ವಿನ್ನರ್ಸ್‌ಟ್ರೋಫಿಯನ್ನು ನೀಡುತ್ತ ಡಾ॥ಕೋರಿ ನಾಗರಾಜ, ಡಾ॥ಕೊಟ್ಟೂರೇಶ್ವರ ಎನ್., ಡಾ॥ ಆದನ ಗೌಡ, ಪ್ರಶಾಂತ್ ಖೇಣಿ, ಪುನೀತ್ ಕುಮಾರ್, "ಈ ಪಂದ್ಯಾವಳಿಗಳಲ್ಲಿ ಭಾಗವಹಿಸಿದ ಎಲ್ಲಾ ತಂಡಗಳಿಗೆ ಅಭಿನಂದನೆಗಳು ವಿಜೇತರಿಗೆ ಇನ್ನು ಹೆಚ್ಚಿನ ಸಾಧನೆಗೈದು ನಮ್ಮದೇಶದ 'ಕ್ರಿಕೆಟ್‌ಟೀಂನಲ್ಲಿ ಸೇರ್ಪಡೆಯಾಗಲುಪ್ರಯತ್ನಿಸಬೇಕಾಗಿದೆ" ಎಂದು ಪ್ರೋತ್ಸಾಹಿಸಿದರು ಈಕಾರ್ಯಕ್ರಮದಲ್ಲಿ ನಮ್ಮಕಾಲೇಜಿನ ಧೈಹಿಕ ಶಿಕ್ಷಕರಾದ ವಿಜಯಮಹಂತೇಶ, ಬಿ.ಐ.ಟಿ.ಎಂ ಇಂಜನೀರಿಂಗ್ ಕಾಲೇಜನ ಅಶೋಕ್.ಬಿ, ತುಮಕೂರಜೋನಲ್ ಸೆಲೆಕ್ಷನ್ ಕಮಿಟೀ ಚೈರ್‌ಮನ್ ಕಿಶೋರ್ ಬಾಬು, ಇನ್ನಿತರರು ಉಪಸ್ಥಿತರಿದ್ದರು. ವೀರಶೈವ ವಿದ್ಯಾವರ್ಧಕ ಸಂಘದಅ–ಧ್ಯಕ್ಷರಾದ ಶ್ರೀಗುರುಸಿದ್ದಸ್ವಾಮಿ, ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರಾದಹಾಗು ಉಪಾಧ್ಯಕ್ಷರಾದ ಅಲ್ಲಂಚನ್ನಪ್ಪ, ಕಾರ್ಯದರ್ಶಿ ಬಿ.ವಿ. ಬಸವರಾಜ್, ಸಹಕಾರ್ಯದರ್ಶಿ ಜೆ. ಶಾಂತವೀರನಗೌಡರು, ಕೋಶಾಧಿಕಾರಿ ಗೋನಾಳ್ ರಾಜಶೇಖರ್‌ಗೌಡರು , ಆರ್. ವೈ.ಎಮ್,ಇ,ಸಿ ಆಡಳಿತ ಮಂಡಳಿಯ ಸದಸ್ಯರಾದ ಜಿ.ಎಂಮಲ್ಲಿಕಾರ್ಜುನರೆಡ್ಡಿ, ಬಸವರಾಜರೂಪನಗುಡಿ, ಜಾನೆಕುಂಟೆ ಪೋಂಪನ ಗೌಡ, ಕೊರ್ಲಗುಂದಿ ಬಸವನ ಗೌಡ, ವೈ ಮಹಾಬಲೇಶ್ವರಪ್ಪತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ॥ಟಿ.ಹನುಮಂತ ರೆಡ್ಡಿ, ಉಪಪ್ರಾಂಶುಪಾಲರಾದ ಡಾ॥ ಸವಿತಾ ಸೊನೋಳಿ, ಶುಭ ಹಾರೈಸಿದರು.

# ಹಿಂದೂಸ್ಥಾನಿ ಸಂಗೀತದಲ್ಲಿ ವಿದ್ವತ್ ಪಡೆದ ಸಾಯಿಶ್ರುತಿ



ಬಳ್ಳಾರಿ : ರಂಗಭೂಮಿಯ ಖ್ಯಾತ ಕಲಾವಿದ ಪುರುಷೋತ್ತಮ ಹಂದ್ಯಾಳು ಅವರ ಪುತ್ರಿ ಸಾಯಿಶ್ರುತಿ ಹಂದ್ಯಾಳು ಅವರು ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯಿಂದ ನಡೆದ ಪರೀಕ್ಷೆಯಲ್ಲಿ ಹಿಂದುಸ್ತಾನಿ ಸಂಗೀತದ ವಿದ್ವತ್ ಪದವಿಯ ಅಂತಿಮ ಪರೀಕ್ಷೆಯಲ್ಲಿ ಡಿಸ್ಟಿಂಕ್ಷನ್‌ನಲ್ಲಿ ಉತ್ತೀರ್ಣರಾಗಿದ್ದಾರೆ.

ಗದಗಿನ ಬಾಷಲ್ ಮಿಷನ್ ಹೈಸ್ಕೂಲ್ ನಲ್ಲಿ ಪರೀಕ್ಷೆ ನಡೆದಿದ್ದವು. ಶಾಸ್ತ್ರ ಮತ್ತು ಪ್ರಯೋಗ ವಿಷಯಗಳಲ್ಲಿ 500 ಅಂಕಗಳಿಗೆ 438 ಅಂಕಪಡೆದಿದ್ದಾರೆ. ಈಗಾಗಲೇ ಕಾರ್ಯಕ್ರಮಗಳನ್ನು ವಿವಿಡೆ ನೀಡಿದ್ದು ಉತ್ತಮ ಗಾಯಕಿಯಾಗಿ ಹೊರ ಹೊಮ್ಮಿದ್ದಾರೆ.

# ಸ್ವಾರಸ್ಯಕರ ಧರ್ಮಾಚರಣೆಗಳೊಂದಿಗೆ ಗ್ರಾಮೀಣ ಕ್ರೀಡೆಗೆ ಆದ್ಯತೆ ಇರಲಿ: ನಾಡಗೌಡ

ನಾಲತವಾಡ: ನಮ್ಮ ಗ್ರಾಮ ಸಂಪೂರ್ಣ ಅಭಿವೃದ್ದಿಯಾಗಬೇಕು, ಚುನಾವಣೆ ವೇಳೆ ಅದು ವೈಯಕ್ತಿಕ ವಿಚಾರ, ಚುನಾವಣೆಯ ನಂತರ ನಾವೆಲ್ಲಾ ಅಭಿವೃದ್ದಿಗೆ ಹೋರಾಡೋಣ ಎನ್ನುವ ಮನೋಭಾವನೆವುಳ್ಳ ಆಲೂರ ಗ್ರಾಮಸ್ಥರು ಸರಕಾರಕ್ಕೆ ಹಾಗೂ ಜನಪ್ರತಿನಿಧಿಗಳಿಗೆ ಎಂದಿಗೂ ವೈಯಕ್ತಿಕ ಬೇಡಿಕೆ ಇಟ್ಟವರಲ್ಲ ಎಂದು ಮಾಜಿ ಸಚಿವ ಸಿ.ಎಸ್.ನಾಡಗೌಡ ಹೇಳಿದರು.

ಇಲ್ಲಿಗೆ ಸಮೀಪದ ಆಲೂರಿನ ಮಾರುತೇಶ್ವರ ಸಭಾ ಭವನದ ಉದ್ಘಾಟನಾ ಸಮಾರಂಭದಲ್ಲಿ ಅವರು ಸನ್ಮಾನಿತರಾಗಿ ಮಾತನಾಡಿದರು.

ಅಂದಿನ ಕುಗ್ರಾಮ ಆಲೂರು ಸದ್ಯ ಹೆಮ್ಮರವಾಗಿ ಬೆಳೆಯುತ್ತಿದೆ ಇದಕ್ಕೆ ಸ್ಥಳಿಯರ ಪರಸ್ಪರ ಸಹಕಾರ, ಬಹುದಿನಗಳ ಮಾರುತೇಶ್ವರ ಸಭಾ ಭವನದ ಕನಸು ಸಕಾರಗೊಳಿಸುವಲ್ಲಿ ಸದಾ ಗ್ರಾಮಸ್ಥರೊಂದಿಗೆ ಅವಿನಾಭಾವ ಸಂಭಂದ ಹೊಂದಿದ್ದ ಹಿರಿಯ ಕೆ.ಎಸ್. ಗೂಳಿ ಹಾಗೂ ವೀರೇಶ ಹಿರೇಗೌಡ ಅವರ ಸೇವೆ ಸ್ಮರಣೀಯ ಎಂದರು.

ನಾನು ಶಾಸಕನಾದ ವೇಳೆ ನೀರಾವರಿ ವಿಷಯಕ್ಕೆ ಸಂಭಂದಿಸಿದಂತೆ ನನಗೆ ಬೆನ್ನು ತಟ್ಟಿದ್ದು ಇದೇ ಗ್ರಾಮದವರು, ಅಭಿವೃದ್ದಿ ಎನ್ನುವ ಅಂಶ ಹರಿಯುತ್ತೀರುವ ನೀರು ಇದ್ದಂತೆ ಈ ನಿಟ್ಟಿನಲ್ಲಿ ಎಲ್ಲರೂ ಪರಸ್ಪರ ಸಹಬಾಳ್ವೆಯಿಂದ ಬದುಕುತ್ತಿದ್ದು ಸಂತಸದ ವಿಷಯ ಎಂದರು.

ನಿರ್ಮಿಸಿದ ನಾನಾ ದೇಗುಲಗಳ ಸ್ವಚ್ಚತೆಗೆ




ಮುಂದಾಗಬೇಕು, ಧಾರ್ಮಿಕ ಕ್ಷೇತ್ರದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡ ಆಲೂರ ಗ್ರಾಮಸ್ಥರು ಭಕ್ತಿ ಪೂರ್ವಕ ದೇಣಿಗೆ ಸಂಗ್ರಹದಲ್ಲಿ ಎತ್ತಿದ ಕೈ ಎಂದರು. ಕೇವಲ ಜಾತ್ರೆಗಳು ಆಚರಣೆಗೆ ಸೀಮಿತಗೊಳ್ಳದೇ ಗ್ರಾಮೀಣ ಕ್ರೀಡೆಗಳಾದ ಕುಸ್ತಿ ಪಂದ್ಯಗಳಿಗೆ ಆದ್ಯತೆ ನೀಡಿ, ಜಾತ್ರೆಗಳು ಸ್ವಾರಸ್ಯಕರವಾಗಿ ಆಚರಣೆಗೊಳ್ಳಬೇಕು ಎಂದ ಅವರು ಇಂದಿನ ಪೀಳಿಗೆಗಳಿಗೆ ಸಂಸ್ಕಾರ ಅರ್ಥ ಹಾಗೂ ಸಂಶೋಧನೆ ಅವಶ್ಯ ಎಂದರು.

ಗಣ್ಯರಾದ ಶಿವಶಂಕರಗೌಡ ಹಿರೇಗೌಡ ಮಾತನಾಡಿ ಬ್ರಹತ್ ಸಭಾಭವನದ ನಿರ್ಮಾಣದ ಹಿಂದೆ ಹಿರಿಯ ಜೀವಿ ಕೆ.ಎಸ್. ಗೂಳಿ ಅವರ ಶ್ರಮ ಅಡಗಿದ್ದು ಮುಂದಿನ ದಿನಗಳಲ್ಲಿ ಅವರು ಹಾಕಿ ಕೊಟ್ಟ ಮಾರ್ಗದಂತೆ ಎಲ್ಲರೂ ನಡೆದುಕೊಳ್ಳೋಣ ಎಂದರು.

ಉದ್ಯಮಿ ಭರತ್‌ಗೌಡ ಪಾಟೀಲ ನಡಹಳ್ಳಿ ಮಾತನಾಡಿ ಸದಾ ಅನ್ನದಾಸೋಹದಲ್ಲಿ ದೇವರನ್ನು ಕಾಣುತ್ತೀರುವ ನಮ್ಮ ತಂದೆ ಶಾಸಕ .ಎಸ್.ಎಸ್.ಪಾಟೀಲ ನಡಹಳ್ಳಿಯವರು ತಮ್ಮ ಎಲ್ಲಾ ಸಮಸ್ಯೆ ಹಾಗೂ ಅಭಿವೃದ್ದಿ ಕಾರ್ಯಗಳಿಗೆ ಕೈಜೋಡಿಸುತ್ತಿದ್ದು ಎಂದಿಗೂ ತಮಗಾಗಿ ನಮ್ಮ ದಾಸೋಹ ಮನೆ ತೆರೆದಿರುತ್ತದೆ ಎಂದರು.

# ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ ವಿಶ್ವ ಮಹಿಳಾ ದಿನಾಚರಣೆ

ಬಳ್ಳಾರಿ : ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ ದಿನಾಂಕ 13–03–2023 ರಂದು ಮಹಿಳಾ ಶಿಕ್ಷಕರು, ವಿಧ್ಯಾರ್ಥಿ ವೃಂದದವರ ಸಮ್ಮುಖದಲ್ಲಿ ಬೆಳಗ್ಗೆ 11:00 ಗಂಟೆಗೆ ವಿಶ್ವ ಮಹಿಳಾ ದಿನಾಚರಣೆಯನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು. ಮುಖ್ಯಅತಿಥಿಗಳಾಗಿ ಡಾ॥ ವೀಣಾ ಕೆ, ಬಳ್ಳಾರಿ ಜಿಲ್ಲಾ ಆಸ್ಪತ್ರೆಯ ಹಿರಿಯ ಸಲಹೆಗಾರರು, ಕಲಾವಿದೆ ಹಾಗೂ ಖ್ಯಾತ ವೈದ್ಯೆ, ಇನ್ನೋರ್ವ ಮುಖ್ಯ ಅಥಿತಿಗಳಾಗಿ ಶಿವಪ್ರಕಾಶ್ ವಸ್ತ್ರದ್ ತಾಂತ್ರಿಕ ನಿರ್ದೇಶಕರು ಜಿಲ್ಲಾ ಸೂಚನಾ ಅಧಿಕಾರಿ ಎನ್.ಐ.ಸಿ.ಮಹಾವಿದ್ಯಾಲಯ ಕಾರ್ಯಕಾರಿಮಂಡಳಿಯ ಸದಸ್ಯರು ಕೊರ್ಲಗುಂದಿ ಬಸವನಗೌಡರು ಉಪಸ್ತಿತರಿದ್ದರು. ಕಾರ್ಯಕ್ರಮದ ಪೂರ್ವದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿನಿಯರು ಡೊಳ್ಳು ಕುಣಿತ ಜನಪದ ಕಲೆಯನ್ನು ಪ್ರದರ್ಶಿಸಿದರು.

ಮುಖ್ಯ ಅಥಿತಿಗಳಾಗಿ ಆಗಮಿಸಿದ ಡಾ॥ ವೀಣಾ ಕೆ ಅವರು ವಿದ್ಯಾರ್ಥಿನಿಯರನ್ನು ಉದ್ದೇಶಿಸಿ ಮಾತನಾಡುತ್ತಾ, ವಿಶ್ವದಲ್ಲಿ ಇನ್ನಿತರ ದೇಶಗಳನ್ನು ಹೋಲಿಸಿದರೆ, ಈ ನಮ್ಮ ಭಾರತ ದೇಶದಲ್ಲಿ ವೇದ ಕಾಲದಿಂದಲು ಸ್ತ್ರೀಯರನ್ನು ಪುಜಾ ಸ್ಥಾನದಲ್ಲಿ ನೆಲಸಿರುವುದು ಹಾಗೂ ಉನ್ನತ ಸ್ಥಾನದಲ್ಲಿ ಪಾರಂಪರೆಯಿಂದ ನಡೆದುಕೊಂಡು ಬಂದಿದೆ ಎಂದು ತಿಳಿಸಿದರು ಹಾಗೂ ಹೆಣ್ಣುಮಕ್ಕಳು ಅವಶ್ಯಕವಾಗಿ ಪಡೆಯಬೇಕಾದ ಲಸಿಕೆಗಳ ಬಗ್ಗೆ ಮಾಹಿತಿ ನೀಡಿದರು.

ಡಾ॥ ವೀಣಾ ಕೆ ಅವರು ಥಾಯ್ಲೆಂಡ್‌ನಲ್ಲಿ ನಡೆದ ಕಲ್ಚರಲ್ ಒಲಂಪಿಯಾಡ್‌ನಲ್ಲಿ ಅವರ ನೃತ್ಯಕ್ಕೆ ಬೆಳ್ಳಿ ಪದಕ ಪದೆದಿರುವುದಲ್ಲದೆ, ರಾಷ್ಟಮಟ್ಟದ ನೃತ್ಯ ಕಲಾವಿದೆಯಾಗಿ ಗುರುತಿಸಿಕೊಂಡಿದ್ದಾರೆ. ಇನ್ನೋರ್ವ ಮುಖ್ಯ ಅಥಿತಿಗಳಾಗಿ ಆಗಮಿಸಿದ ಶಿವಪ್ರಕಾಶ್ ವಸ್ರದ್ ತಾಂತ್ರಿಕ ನಿರ್ದೇಶಕರು ಜಿಲ್ಲಾ ಸೂಚನಾ ಅಧಿಕಾರಿ ಎನ್. ಐ.ಸಿ ಹಾಗೂ ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿ



ಮಾತನಾಡುತ್ತಾ "ನಮ್ಮ ಭಾರತ ದೇಶದಲ್ಲಿ ಶತಮಾನಗಳಿಂದ ಕುಟುಂಬದಲ್ಲಿ ಯಾವುದೇ ಕಠಿಣ ಪರಿಸ್ತಿತಿಗಳಲ್ಲಿ ತಮ್ಮ ಮಹೀಳೆಯರಲ್ಲಿ ಚರ್ಚಿಸಿ ಆಂತಿಮ ನೀರ್ಣಯಗಳನ್ನು ತೆಗೆದುಕೊಳ್ಳುತ್ತಾರೆ ಹಾಗಾಗಿ ಮಹೀಳೆಯರುನ್ನು ನೀರ್ಣಯಾತ್ಮಕ ಸ್ಥಾನದಲ್ಲಿ ನಡೆದುಕೊಂಡು ಬಂದಿರುತ್ತಾರೆ, ಆದ್ದರಿಂದ ಮಹಿಳೆಯರು ಡಿಜಿಟಲ್ ಕ್ಷೇತ್ರದ ಕುರಿತು ಮಾಹಿತಿ ಪಡೆಯುವುದು ಅತ್ಯವಶ್ಯಕವಾಗಿದೆ ಎಂದು ತಿಳಿಸಿದರು.

ಉಪಪ್ರಾಂಶುಪಾಲರಾದ ಡಾ॥ ಸವಿತಾ ಸೊನೋಳಿ, ಮಹಿಳೆ ಇಂದು ಪ್ರತಿಯೊಂದು ರಂಗದಲ್ಲೂ ಪುರಷನಿಗೆ ಸಮಾನವಾಗಿ ದುಡಿಯುತ್ತಿದ್ದಾಳೆ ಆದ್ದರಿಂದ ಮಹಿಳೆಯು ಡಿಜಿಟಲ್ ಕ್ಷೇತ್ರದ ಕುರಿತು ಮಾಹಿತಿ ಪಡೆಯುವುದು ಅತ್ಯವಶ್ಯಕವಾಗಿದೆ ಹಾಗೂ ಆನ್‌ಲೈನ್ ವ್ಯಾಪಾರದ ಗುಂಗಿನಲ್ಲಿ ಅಂತರ್ಜಾಲದ ಮೂಲಕ ಮೋಸಹೋಗುವ ಸಂಭವವನ್ನು ಕುರಿತು ಎಚ್ಚರಿಸಿದರು. ಪ್ರಾಂಶುಪಾಲರಾದ ಡಾ॥ ಟಿ.ಹನುಮಂತ ರೆಡ್ಡಿಯವರು ಮಾತನಾಡುತ್ತಾ, "ಮಹಿಳೆಯರನ್ನು ಎಂದಿಗೂ ದುರ್ಬಲರೆಂದು ಪರಿಗಣಿಸಬಾರದು.

ಅವರು ಜೀವನದ ಪ್ರತಿಯೋಂದು ಹಂತದಲ್ಲಿ ತಮ್ಮನ್ನು ತಾವು ಸಾಬೀತು ಪಡಿಸಿದ್ದಾರೆ" ಎಂದು ತಿಳಿಸಿದರು ಹಾಗೂ ಉದ್ಯಮ ಕ್ಷೇತ್ರದಲ್ಲಿ ಹೆಸರುವಾಸಿಯಾದ ಹಾಲವಾರು ಮಹಿಳೆಯರನ್ನು ನೆನಪಿಸಿದರು.

ಮಹಾವಿದ್ಯಾಲಯದ ಪ್ರಧ್ಯಾಪಕಿಯಾದ ಶ್ರೀಮತಿ ಜಯಶ್ರೀ ಇವರು ಮಾತನಾಡುತ್ತಾ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ–ಯ ಮಹತ್ವವನ್ನು ಕುರಿತು ತಿಳಿಸಿದರು. ಈ ಎಂಜಿನೀರಿಂಗ್ ಕಾಲೆಜುನಲ್ಲಿ ಕೆಲಸ ಮಾಡುತ್ತಿರುವ, ಉನ್ನತ ಡಾಕ್ಟರೇಟ್ ಪದವಿ ಪಡೆದಿರುವ, ಅಲ್ಲದೇ ವಿಶೇಷ ಸಾಧನೆಗಳು ಮಾಡಿರುವ ಮಹಿಳೆಯರಾದ ಡಾ॥ ಭಾಗ್ಯ ಕೆ ಅರ್, ಡಾ॥ ಗಿರಿಜ ವಾಣಿ, ಡಾ॥ಜ್ಯೋತಿ ಕೆ ಅರ್ ಅವರನ್ನು ಮಹಾವಿದ್ಯಾಲಯದ ಆರ್.ವೈ.ಎಂ.ಈ.ಸಿ ಮಹಿಳೆಯರ ಪರವಾಗಿ ಸನ್ಮಾನಿಸಲಾಯಿತು. ಪ್ರತಿನಿತ್ಯ ಮಹಾವಿದ್ಯಾಲಯವನ್ನು ಶುಚಿಯಾಗಿರಿಸುವ ಕಾಯಕದ ಎಲ್ಲಾ ಸಿಬ್ಬಂಧಿ ವರ್ಗಕ್ಕೆ ಮಹಾವಿದ್ಯಾಲಯದ ಎಲ್ಲಾ ಮಹಿಳಾ ಮಹಿಳಾ ಶಿಕ್ಷಕಿಯರ ಪರವಗಿ ಉಡುಗೊರೆಯನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಎಲ್ಲಾ ವಿಭಾಗಗಳ ಮುಖ್ಯಸ್ತರು ವಿದ್ಯಾರ್ಥಿನಿವೃಂದದವರು, ಮಹಾವಿದ್ಯಾಲಯದ ಮಹಿಳಾಸಿಬ್ಬಂದಿ, ಭಾಗವಹಿಸಿದ್ದರು. ಪ್ರಧ್ಯಾಪಕಿಯರಾದ ಡಾ॥ ಅನುರಾಧ ಸ್ವಾಗತಿಸಿದರು, ಡಾ॥ ಪ್ರಭಾವತಿ ವಂದಿಸಿದರು, ಶ್ರೀಮತಿ ವಾಣಿ , ಶ್ರೀಮತಿ ಶೀಲಾ, ಶ್ರೀಮತಿ ರೋಹಿಣಿ ಅತಿಥಿಯನ್ನು ಪರಿಚಯಿಸಿದರು, ಹಾಗು ಶ್ರೀಮತಿ ಸೌಮ್ಯ, ಶ್ರೀಮತಿ ಗಂಗಮ್ಮ ನಿರೂಪಿಸಿದರು.

## ಕಂಪ್ಯೂಟರ್ ಹಾರ್ಡವೇರ್ ಮತ್ತು ನೆಟವರ್ಕಿಂಗ್ ತರಬೇತಿ: ಅರ್ಜಿ ಆಹ್ವಾನ

ಬೆಳಗಾವಿ: ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವಕ, ಯುವತಿಯರಿಗೆ 45 ದಿನಗಳ ಕಂಪ್ಯೂಟರ್ ಹಾರ್ಡವೇರ್ ಮತ್ತು ನೆಟವರ್ಕಿಂಗ್ ತರಬೇತಿ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಹತೆಗಳು :**

18 ರಿಂದ 45 ವಯಸ್ಸಿನವರಾಗಿರಬೇಕು, ಗ್ರಾಮೀಣ ಪ್ರದೇಶದವರಾಗಿರಬೇಕು, BPL ಕಾರ್ಡ ಹೊಂದಿರಬೇಕು, ದಾಖಲೆಗಳು. BPL ಕಾರ್ಡ, ಆಧಾರ ಕಾರ್ಡ, ಬ್ಯಾಂಕ ಪಾಸ್ ಬುಕ್. 4 ಭಾವಚಿತ್ರಗಳನ್ನು ಲಗತ್ತಿಸಬೇಕು.

ತರಬೇತಿ ಅವಧಿ ಮಾರ್ಚ. 23, 2023 ರಿಂದ ಪ್ರಾರಂಭವಾಗಲಿದೆ.

ಅರ್ಜ ಸಲ್ಲಿಸುವ ಕೊನೆಯ ದಿನಾಂಕ ಮಾರ್ಚ. 20 2023, ರೊಳಗಾಗಿ ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಕೆಳಗೆ ನೀಡಿದ https://docs.google.com/forms/d/e/1FAIpQLSdZEI9npV5dVuQbdqFXUGc6yt__7daI02YrhyvRSLywjlFfKA/viewform?vc=0&c=0&w=1&flr=0 ಗೂಗಲ್ ಪಾರ್ಮ ಲಿಂಕನಲ್ಲಿ ಮಾಹಿತಿ ಸಲ್ಲಿಸಬಹುದಾಗಿದೆ.

ಸಂಸ್ಥೆಯ ವಿಳಾಸ ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪ್ಲಾಟ ನಂ. ಸಿ ಎ –03 (ಪಾರ್ಟ) ಕಣಬರ್ಗಿ ಇಂಡಸ್ತ್ರಿಯಲ್ ಎರಿಯಾ, ಆಟೋ ನಗರ, ಬೆಳಗಾವಿ – 590015 ಭೇಟಿ ನಿಡಬಹುದು.

45 ದಿನಗಳಕಾಲ ತರಬೇತಿ ಅವಧಿಯಲ್ಲಿ ಊಟ, ವಸತಿ ಸಂಪೂರ್ಣ ಉಚಿತವಾಗಿರುತ್ತದೆ, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0831–2440644, 8296792166, 9845750043, 8050406866, 8867388906, 9449860564 ಗೆ 9.30 ರಿಂದ ಸಾಯಂಕಾಲ 6. ವರೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಮಹಿಳಾ ಐಟಿಐ: ಅಲ್ಪಾವಧಿ ಕೋರ್ಸುಗಳ ಉಚಿತ ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಮಹಿಳಾ) ಉದ್ಯಮಬಾಗ ಇಲ್ಲಿ ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆಯಡಿ (ಕಂಎಗಿಜ4.0) ಅಲ್ಪಾವಧಿ ಕೋರ್ಸುಗಳ ಉಚಿತ ತರಬೇತಿಯ ಪ್ರವೇಶಕ್ಕಾಗಿ Data Entry Operator, CNC Operator – Vertical Machining Centre, Assistant Electrician, Electric Vehicle Service Technician ಈ ಕೋರ್ಸುಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದಿಂದ ಸರ್ಟಿಫಿಕೇಟ್‌ಗಳನ್ನು ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಮಾರ್ಚ.25 2023 ರ ಒಳಗಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮಹಿಳಾ) ಉದ್ಯಮಬಾಗ ಕಛೇರಿಗೆ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 9632130029, 9663040353, 9047296100 ಗೆ ಸಂಪರ್ಕಿಸಬಹುದು ಎಂದು ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್.ಎಸ್.ಎಲ್.ಸಿ/ಐಟಿಐ ಪಾಸಾದ ಅಭ್ಯರ್ಥಿಗಳಿಗೆ ಜಿಲ್ಲಾ ಮಟ್ಟದ ಅಪ್ರೆಂಟಿಸ್ ಮೇಳ

ಬೆಳಗಾವಿ: ಶಿಶುಕ್ಷು ತರಬೇತಿ ಯೋಜನೆಯನ್ನು ಹೆಚ್ಚು ಪರಿಣಾಮಕಾರಿಯಾಗಿಸಲು ಹಾಗೂ ತರಬೇತಿದಾರರಿಗೆ ಅನುಕೂಲವಾಗುವಂತೆ ಜಿಲ್ಲಾ ಮಟ್ಟದ (PMNAM) ಅಪ್ರೆಂಟಿಸ್ ಮೇಳವನ್ನು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಕೆ.ಎಲ್.ಇ ಆಸ್ಪತ್ರೆ ಎದುರು ಗೋಕಾಕ ಇಲ್ಲಿ ಮಾರ್ಚ.20 2023 ರಂದು ಬೆಳಿಗ್ಗೆ 10.30 ಗಂಟೆಗೆ ಆಯೋಜಿಸಲಾಗಿದೆ.

ಸದರಿ ಮೇಳದಲ್ಲಿ ಹಲವಾರು ಉದ್ಯಮಿಗಳು ಭಾಗವಹಿಸಲಿದ್ದು, ಆಸಕ್ತ ಎಸ್.ಎಸ್.ಎಲ್.ಸಿ/ಐಟಿಐ ಪಾಸಾದ ಅಭ್ಯರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ಹಾಜರಾಗಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರ ಕಾರ್ಯಾಲಯ ಸ.ಕೈ.ತ.ಸಂಸ್ಥೆ ಗೋಕಾಕ– ದೂರವಾಣಿ ಮತ್ತು ಫ್ಯಾಕ್ಸ್ ಸಂಖ್ಯೆ 08332224006 ಗೆ ಅಥವಾ ಇಮೇಲ್ ವಿಳಾಸ govtitigkk@gmail.com ಅಥವಾ ಮೊಬೈಲ್ ಸಂಖ್ಯೆ 7892955100, 9341671956 ಗೆ ಸಂಪರ್ಕಿಸಬಹುದು ಎಂದು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಂದು ವರ್ಷ ಅವಧಿಗೆ ಶಿಶಿಕ್ಷು ಅಭ್ಯರ್ಥಿಗಳ ತರಬೇತಿಗೆ ಅರ್ಜಿ

ಬೆಳಗಾವಿ: ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ, ಬೆಳಗಾವಿ ವಿಭಾಗವು ಐ.ಟಿ.ಐ ನಲ್ಲಿ ಮೆಕ್ಯಾನಿಕಲ್ ಡಿಸೇಲ್, ಮೆಕ್ಯಾನಿಕ್ ಮೋಟರ್ ವೆಹಿಕಲ್, ಎಲೆಕ್ಟ್ರೀಶಿಯನ್, ಫಿಟ್ಟರ್, ವೆಲ್ಡರ್ (ಗ್ಯಾಸ್ & ಎಲೆಕ್ಟ್ರಿಕ್), ಟರ್ನರ್ ಮತ್ತು ಕೋಪಾ (Computer operator & programming assistant) ಟ್ರೇಡ್‌ನ ವಿದ್ಯಾರ್ಹತೆ ಪೂರ್ಣಗೊಳಿಸಿರುವ ಅಭ್ಯರ್ಥಿಗಳಿಂದ 1 ವರ್ಷ ಅವಧಿಗೆ ಶಿಶಿಕ್ಷು ತರಬೇತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಅಭ್ಯರ್ಥಿಗಳು www.apprenticeshipindia.gov.in ನಲ್ಲಿ ತಮ್ಮ ವೈಯಕ್ತಿಕ/ಶೈಕ್ಷಣಿಕ ಮಾಹಿತಿ/ದಾಖಲಾತಿಗಳನ್ನು ಅಪಲೋಡ್ ಮಾಡಿ ತಮ್ಮ ನೊಂದಣಿ 100 ಪ್ರತಿಶತ ಆಗಿರುವ ಕುರಿತಂತೆ ಖಚಿತ ಪಡಿಸಿಕೊಂಡ ನಂತರ NWKRTC BELAGAVI E02172900001 ರಡಿಯಲ್ಲಿ ಆಹ್ವಾನಿಸಿರುವ ಮೇಲಿನ ವೃತ್ತಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.


ನೊಂದಣಿ ಇಲ್ಲದೇ/ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸದೇ ಇರುವಂತಹ ಅಭ್ಯರ್ಥಿಗಳನ್ನು ಅನರ್ಹಗೊಳಿಸಲಾಗುವುದು. ಪರಿಪೂರ್ಣವಾಗಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ನೇರ ಸಂದರ್ಶನಕ್ಕಾಗಿ ಮಾರ್ಚ.18 2023 ರಂದು ಬೆಳಿಗ್ಗೆ 11 ಗಂಟೆಗೆ ತಮ್ಮ ಎಲ್ಲ ಮೂಲ ಶೈಕ್ಷಣಿಕ/ವೈಯಕ್ತಕ ದಾಖಲಾತಿಗಳೊಂದಿಗೆ ವಾ.ಕ.ರ.ಸಾ.ಸಂಸ್ಥೆ ಬೆಳಗಾವಿ ವಿಭಾಗೀಯ ಕಛೇರಿಗೆ ಹಾಜರಾಗಬೇಕು.

ಅಪ್ರಂಟಿಸ್ ಕಾಯ್ದೆ 1961 ರ ನಿಯಮಾವಳಿಗಳನ್ವಯ ಅರ್ಹ ಅಭ್ಯರ್ಥಿಗಳಿಗೆ ಮೀಸಲಾತಿ ಕಾಯ್ದಿರಿಸಲಾಗಿದೆ.

ಹೆಚ್ಚಿನ ವಿವರಗಳಿಗಾಗಿ 7760991603/7411002301 ದೂರವಾಣಿ ಸಂಖ್ಯೆಗಳಿಗೆ ಸಂಪರ್ಕಿಸಬಹುದು ಎಂದು ವಾಕರಸಾಸಂಸ್ಥೆಯ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಮಠಗಳ ಕೊಡುಗೆ ಅಪಾರ: ಶ್ರೀ ರಂಭಾಪುರಿ ಜಗದ್ಗುರು

ಸೇಡಂ: ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ಸಂಸ್ಕಾರ ಮತ್ತು ಶಿಕ್ಷಣ ಬಹಳ ಮುಖ್ಯ. ಸುಸಂಸ್ಕೃತ ಸದೃಢ ಸಮಾಜ ನಿರ್ಮಾಣಕ್ಕೆ ವೀರಶೈವ ಮಠಗಳ ಕೊಡುಗೆ ಅಪಾರವಾದುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ತಾಲೂಕಿನ ಮಳಖೇಡ ಮೂಲಾಧಾರ ಸಂಸ್ಥಾನ ಬೃಹನ್ಮಠದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ವೀರಶೈವ ಧರ್ಮ ಸಕಲರಿಗೂ ಒಳಿತನ್ನೇ ಮಾಡುತ್ತಾ ಬಂದಿದೆ. ಜಾತಿಗಿಂತ ನೀತಿ ಬಹಳ ದೊಡ್ಡದು. ಪರಸ್ಪರ ಸಾಮರಸ್ಯ ಸೌಹಾರ್ದತೆ ಬೆಳೆಸುವ ನಿಟ್ಟಿನಲ್ಲಿ ಮಠಗಳು ಶ್ರಮಿಸುತ್ತಾ ಬಂದಿವೆ. ಆಧುನಿಕತೆಯ ಮತ್ತು ವೈಚಾರಿಕತೆ ಹೆಸರಿನಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶಗೊಳ್ಳಬಾರದು. ಅತಿಯಾದ ವೈಚಾರಿಕತೆ ಧರ್ಮದ ವಿನಾಶಕ್ಕೆ ಕಾರಣವಾಗುತ್ತದೆ. ಸತ್ಯ ಶುದ್ಧ ತತ್ವ ತಳಹದಿಯ ಮೇಲೆ ಮಾನವ ಜೀವನ ರೂಪಿತಗೊಂಡರೆ ಬಾಳೆಲ್ಲವು ಉಜ್ವಲ. ಸಂಸ್ಕಾರದ ಕೊರತೆಯಿಂದಾಗಿ ಮಾನವ ಜೀವನ ಅತೃಪ್ತಿ ಅಸಮಾಧಾನದಿಂದ ಕೂಡಿ–ದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಸಿದ್ಧಾಂತ ಶಿಖಾಮಣಿಯಲ್ಲಿ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಪರಿಪಾಲಿಸದಿದ್ದರೆ ಜೀವನ ವ್ಯರ್ಥವೆಂದು ಎಚ್ಚರಿಸಿದ್ದಾರೆ. ವೀರಶೈವ ಧರ್ಮದಲ್ಲಿ ಗುರುವಿಗೆ ಪ್ರಥಮ ಸ್ಥಾನ ಕಲ್ಪಿಸಿದ್ದಾರೆ. ಮಳಖೇಡ ಮೂಲಾಧಾರ ಸಂಸ್ಥಾನ ಬೃಹನ್ಮಠ ಶ್ರೀ ರಂಭಾಪುರಿ ಪೀಠದ ಶಾಖಾ ಮಠವಾಗಿದ್ದು ವಿದ್ಯಾ ವಿನಯ ವೇದ ಜೋತಿಷ್ಯ ವಿದ್ವಾನ್ ವಿರೂಪಾಕ್ಷ ದೇವರಿಗೆ ಶ್ರೀ ಗುರು ಪಟ್ಟಾಧಿಕಾರ ನೆರವೇರಿಸಿ ನೂತನ ಶ್ರೀಗಳಿಗೆ 'ಶ್ರೀ ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯ ಸ್ವಾಮಿಗಳು' ಎಂಬ ನೂತನ ಅಭಿದಾನದಿಂದ ದಂಡ ಕಮಂಡಲ ಸಮೇತ ಪಂಚ ಮುದ್ರಾ ಅನುಗ್ರಹಿಸಿ ಶ್ರೀ ಪೀಠದಿಂದ ರೇಶ್ಮೆ ಮಡಿ, ಚಿನ್ನದುಂಗುರ, ಸ್ಮರಣಿಕೆ, ಫಲ ಪುಷ್ಪಗಳಿತ್ತು ಶುಭ ಹಾರೈಸಿದರು.

ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು, ಹಾರಕೂಡ ಹಿರೇಮಠದ ಡಾ॥ಚನ್ನವೀರ ಶಿವಾಚಾರ್ಯ ಸ್ವಾಮಿಗಳ ಸಮ್ಮುಖದಲ್ಲಿ ಆಗಮಿಸಿದ ಹರ ಗುರು ಚರಮೂರ್ತಿಗಳ ಸಮಕ್ಷಮದಲ್ಲಿ ಸಂಸ್ಕಾರ ನೀಡಿ ಷಟ್ಸ್ಥಲ ಬ್ರಹ್ಮೋಪದೇಶ ಮಾಡಿದರು. ನೂತನ ಶ್ರೀಗಳವರು ತಮ್ಮ ಧರ್ಮ ಸಂದೇಶದಲ್ಲಿ ಮಾತನಾಡಿ ಮಳಖೇಡ ಮೂಲಾಧಾರ ಸಂಸ್ಥಾನ ಬೃಹನ್ಮಠದ ಉಜ್ವಲ ಬೆಳವಣಿಗೆ ಮತ್ತು ಸಕಲ ಸದ್ಭಕ್ತರ ಶ್ರೇಯೋಭಿವೃದ್ಧಿಗಾಗಿ ಸದಾ ಶ್ರಮಿಸುವೆ. ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದ ಬಲದಿಂದ ವೀರಶೈವ ಧರ್ಮದ ಹಿರಿಮೆ ಗುರುಸ್ಥಲದ ಆದರ್ಶ ಸಂಸ್ಕೃತಿ ಬೆಳೆಸುವುದಾಗಿ ಸಂಕಲ್ಪ ಕೈಕೊಂಡರು.

ಸೇಡಂ ಕ್ಷೇತ್ರದ ಶಾಸಕ ರಾಜಕುಮಾರ ಪಾಟೀಲ ತೆಲ್ಕೂರ ಸಮಾರಂಭ ಉದ್ಘಾಟಿಸಿ ಮಾತನಾಡಿ ಧರ್ಮವಿಲ್ಲದೇ ಮನುಷ್ಯ ಬದುಕಿ ಬಾಳಲಾರ. ಸಂಸ್ಕಾರ ಸೌಜನ್ಯ ಕಲಿಸುವ ಆಧ್ಯಾತ್ಮ ಕೇಂದ್ರಗಳು ನಮ್ಮೆಲ್ಲರ ಬಾಳಿಗೆ ಬೆಳಕನ್ನು ತೋರುತ್ತಾ ಬಂದಿವೆ. ಮಳಖೇಡ ಬೃಹನ್ಮಠಕ್ಕೆ ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯರು ಶ್ರೀ ಮಠದ ಗುರುತ್ವಾಧಿಕಾರ ಸ್ವೀಕರಿಸಿ ನಮ್ಮೆಲ್ಲರಿಗೆ ಆದರ್ಶ ಮಾರ್ಗದರ್ಶನ ನೀಡುತ್ತಾರೆಂದರು. ಹಾರಕೂಡ ಹಿರೇಮಠದ ಡಾ॥ಚನ್ನವೀರ ಶಿವಾಚಾರ್ಯರು ಮತ್ತು ಬೃಂಗಿಮಠದ ಕೊಟ್ಟೂರೇಶ್ವರ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು. ಸೇಡಂ ಶಿವಶಂಕರ ಶಿವಾಚಾರ್ಯರು, ಕಡಕೋಳ ಡಾ.ರುದ್ರಮುನಿ ಶಿವಾಚಾರ್ಯರು, ಶ್ರೀನಿವಾಸ ಸರಡಗಿಯ ಡಾ. ರೇವಣಸಿದ್ಧೇಶ್ವರ ಶಿವಾಚಾರ್ಯರು, ಸ್ಟೇಷನ್ ಬಬಲಾದ ಶಿವಮೂರ್ತಿ ಶಿವಾಚಾರ್ಯರು, ತೊನಸನಹಳ್ಳಿ ರೇವಣಸಿದ್ಧ ಚರಂತೇಶ್ವರ ಶಿವಾಚಾರ್ಯರು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು. ಮಾಜಿ ಸಚಿವ ಡಾ. ಶರಣ ಪ್ರಕಾಶ ಪಾಟೀಲ, ವಿಧಾನ ಪರಿಷತ್ ಸದಸ್ಯ ಬಿ.ಜಿ.ಪಾಟೀಲ, ಬಾಲರಾಜ ಗುತ್ತೇದಾರ, ಜಿ.ಲಲ್ಲೇಶ, ಶಾಂತಾಬಾಯಿ ಚನ್ನಬಸಪ್ಪ ತಳಕಿನ್, ಶರಣಕುಮಾರ ಮೋದಿ, ಅರುಣಕುಮಾರ ಪಾಟೀಲ, ಶಿವಶರಣಪ್ಪ ಸೀರಿ ಮೊದಲಾದ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಚಂದ್ರಶೆಟ್ಟಿ ಬಂಗಾರ ಮತ್ತು ವಿಜಯಕುಮಾರ ರೆಡ್ಡಿ ನಿರೂಪಿಸಿದರು.

ಸಮಾರಂಭದ ನಂತರ ನೂತನ ಮಠಾಧ್ಯಕ್ಷರಾದ ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯ ಸ್ವಾಮಿಗಳ ಪಲ್ಲಕ್ಕಿ ಉತ್ಸವ ಸಕಲ ವಾದ್ಯ ವೈಭವ, ಕಳಸ ಕನ್ನಡಿಯೊಂದಿಗೆ ಗ್ರಾಮದಲ್ಲಿ ಸಂಭ್ರಮದಿಂದ ಜರುಗಿತು. ಆಗಮಿಸಿದ ಎಲ್ಲ ಭಕ್ತರಿಗೂ ಅನ್ನ ದಾಸೋಹ ಜರುಗಿತು.

# ನೈಸರ್ಗಿಕ ಕೃಷಿ ತರಬೇತಿ ಕಾರ್ಯಕ್ರಮ




ಬೆಳಗಾವಿ: ಮತ್ತಿಕೊಪ್ಪದ ಐಸಿಎಆರ್–ಕೆಎಲ್‌ಇ ಕೃಷಿ ವಿಜ್ಞಾನ ಕೇಂದ್ರದಲ್ಲಿ ನೈಸರ್ಗಿಕ ಕೃಷಿ ತರಬೇತಿಯನ್ನು ಹಮ್ಮಿಕೊಳ್ಳಲಾಯಿತು. ತರಬೇತಿ ಕಾರ್ಯಕ್ರಮವನ್ನು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಹಾಗೂ ಶೂನ್ಯ ಬಂಡವಾಳ ನೈಸರ್ಗಿಕ ಕೃಷಿ ಯೋಜನೆಯ ಮುಖ್ಯಸ್ಥರಾದ ಡಾ. ಆನಂದ ಮಾಸ್ತಿಹೋಳಿ ಉದ್ಘಾಟಿಸಿದರು. ನಂತರ ನೈಸರ್ಗಿಕ ಕೃಷಿಯ ಕುರಿತು ಉಪನ್ಯಾಸ ನೀಡಿದ ಅವರು ನೈಸರ್ಗಿಕ ಕೃಷಿ ರೈತರ ಹೊಲದಲ್ಲಿಯೇ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿ ಕಡಿಮೆ ಖರ್ಚಿನಲ್ಲಿ ಅಳವಡಿಸಬಹುದಾದ ರಾಸಾಯನಿಕ ಮುಕ್ತ ಕೃಷಿ ಪದ್ಧತಿಯಾಗಿದೆ.

ಈ ಕೃಷಿಯಲ್ಲಿ ನಾಲ್ಕು ಮೂಲ ತತ್ವಗಳಾದ ಬೀಜಾಮೃತ, ಜೀವಾಮೃತ, ಬೆಳೆಗಳ ಹೊದಿಕೆ ಮತ್ತು ವಾಫಸಾ ಆಧಾರದಲ್ಲಿ ಸಸ್ಯಗಳಿಗೆ ಬೇಕಾಗುವ ಪೋಷಕಾಂಶಗಳನ್ನು ಪೂರೈಸುವ ಸೂಕ್ಷ್ಮಾಣು ಜೀವಿಗಳನ್ನು ಹಾಗೂ ನೈಸರ್ಗಿಕ ಎರೆಹುಳುಗಳ ಅಭಿವೃದ್ಧಿಯನ್ನು ಪ್ರೋತ್ಸಾಹಿಸಲಾಗುವುದು.

ನೈಸರ್ಗಿಕ ಕೃಷಿಯಲ್ಲಿ ಹಸು ಮೂಲ ಆಧಾರವಾಗಿದ್ದು ಹಸುವಿನ ಸಗಣಿ ಮತ್ತು ಗಂಜಲುಗಳನ್ನು ಬಳಸಿ ನೈಸರ್ಗಿಕ ಕೃಷಿ ಪರಿಕರಗಳನ್ನು ತಯಾರಿಸಿ ಬಳಸಲಾಗುವುದು. ಆದ್ದರಿಂದ ದೇಸಿ ಹಸುಗಳನ್ನು ಸಂರಕ್ಷಿಸಿ ಪಾಲನೆ ಮಾಡಬೇಕೆಂದು ಕರೆ ನೀಡಿದರು.

ಸತ್ತಿಗೇರಿ ಗ್ರಾಮದ ಪ್ರಗತಿಪರ ರೈತರಾದ ಶ್ರೀ ವೀರನಗೌಡ ಸರನಾಡಗೌಡ್ರ ಮಾತನಾಡಿ, ರೈತರು ಕೃಷಿ ವ್ಯವಸ್ಥೆಯನ್ನು ರಾಸಾಯನಿಕಗಳಿಂದ ಮುಕ್ತಗೊಳಿಸಲು ಹಾಗೂ ವಿಷಮುಕ್ತ ಆಹಾರ ಉತ್ಪಾದಿಸಲು ನೈಸರ್ಗಿಕ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವ ಅವಶ್ಯಕತೆ ಇದೆ ಎಂದರು.

ಪ್ರಾಸ್ತಾವಿಕ ಮಾತನಾಡಿದ ಕೇಂದ್ರದ ವಿಜ್ಞಾನಿ ದೇಶಾದ್ಯಂತ 425 ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ನೈಸರ್ಗಿಕ ಕೃಷಿ ಯೋಜನೆ ಜಾರಿಯಲ್ಲಿದ್ದು, ಈ ಕೃಷಿಯನ್ನು ವಿಸ್ತರಿಸುವ ಯೋಜನೆಯ ಭಾಗವಾಗಿ ಎರಡು ದಿನಗಳ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ ಎಂದರು. ನೈಸರ್ಗಿಕ ಕೃಷಿ ಪರಿಕರವಾದ ಜೀವಾಮೃತದ ತಯಾರಿಕೆ ಪದ್ಧತಿ ಪ್ರಾತ್ಯಕ್ಷಿಕೆಯನ್ನು ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಕೇಂದ್ರದ ವಿಜ್ಞಾನಿ ಡಾ. ಎಸ್. ಎಸ್. ಹಿರೇಮಠ ಸ್ವಾಗತಿಸಿದರು. ಜಿ. ಬಿ. ವಿಶ್ವನಾಥ ವಂದಿಸಿದರು. ಪ್ರವೀಣ ಯಡಹಳ್ಳಿ, ಶಂಕರಗೌಡ ಪಾಟೀಲ ಹಾಗೂ ವಿನೋದ ಕೋಚಿ ಭಾಗವಹಿಸಿದ್ದರು. ತರಬೇತಿಯಲ್ಲಿ ವಿವಿಧ ತಾಲೂಕುಗಳ 45 ರೈತರು ಪಾಲ್ಗೊಂಡಿದ್ದರು.

## ವಿದ್ಯುತ್ ನಿಲುಗಡೆ

ಬೆಳಗಾವಿ: ದಿನಾಂಕ 19.03.2023 ರಂದು ಬೆಳಿಗ್ಗೆ 10.00 ಘಂಟೆಯಿಂದ ಸಾಯಂಕಾಲ 05.00 ಘಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ ಎಮ್. ಕೆ. ಹುಬ್ಬಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಾಲ್ಕನೇಯ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಹಿರೇಮುನವಳ್ಳಿ, ಚಿಕ್ಕಮುನವಳ್ಳಿ, ಗಾಡಿಕೊಪ್ಪ, ಜಿಕನೂರ, ಪಾರಿಶ್ವಾಡ, ಇಟಗಿ, ಬೋಗೂರ, ಬೇಡರಹಟ್ಟಿ, ಹಿರೇಹಟ್ಟಿಹೊಳಿ, ಚಿಕ್ಕಹಟ್ಟಿಹೊಳಿ ಹಾಗೂ ಕರವಿನಕೊಪ್ಪ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ ಹಾಗೂ

ದಿನಾಂಕ 19.03.2023 ರಂದು ಬೆಳಿಗ್ಗೆ 10.00 ಘಂಟೆಯಿಂದ ಸಾಯಂಕಾಲ 05.00 ಘಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ ಎಮ್. ಕೆ. ಹುಬ್ಬಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಾಲ್ಕನೇಯ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 33 ಕೆ.ವ್ಹಿ. ಗಂದಿಗವಾಡ ಉಪಕೇಂದ್ರದಿಂದ ಸರಬರಾಜು ಆಗುವ ಗಂದಿಗವಾಡ, ಹಿರೇ ಅಂಗ್ರೊಳ್ಳಿ, ಚಿಕ್ಕ ಅಂಗ್ರೊಳ್ಳಿ, ಹಂದೂರ, ಕೇರವಾಡ, ಹುಲಿಕೊತ್ತಲ, ಇಟಗಿ, ಬೋಗೂರ, ಬೇಡರಹಟ್ಟಿ, ತೊಲಗಿ, ಬಿಳಕಿ, ಅವರೊಳ್ಳಿ ಹಾಗೂ ಕಗ್ಗಣಗಿ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ.

## ಶ್ರೀ ದರ್ಗಮ್ಮನ ಕಳಸೋತ್ಸವ



ಹುಳಿಯಾರು: ಹುಳಿಯರು ಸಮೀಪದ ಗೌಡಗೆರೆ ಶ್ರೀ ದುರ್ಗಮ್ಮನವರ 34 ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಕಳಸೋತ್ಸವ ಏರ್ಪಡಿಸಲಾಗಿತ್ತು.

ಗೌಡಗೆರೆ ಶ್ರೀ ದುರ್ಗಮ್ಮ ದೇವಿ, ಹುಳಿಯಾರು ಶ್ರೀ ದುರ್ಗಮ್ಮ ದೇವಿ ಸಮ್ಮುಖದಲ್ಲಿ ಮಜ್ಜನ ಬಾವಿಯಿಂದ ಕಳಸೋತ್ಸವಕ್ಕೆ ಚಾಲನೆ ನೀಡಲಾಯಿತು.

ಗೌಡಗೆರೆ, ಕೆಂಕೆರೆ, ಕುರಿಹಟ್ಟಿ, ಕುಪ್ಪೂರುಚಿಕ್ಕನಪಾಳ್ಯ, ಕೊಡಿಪಾಳ್ಯ, ಲಿಂಗಪ್ಪನಪಾಳ್ಯ, ದಸೂಡಿ, ಬೆನಕನಹಳ್ಳಿ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ 30 ತಕ್ಕೂ ಹೆಣ್ಣುಮಕ್ಕಳು ಕಳಶ ಹೊತ್ತು ನಡೆಮುಡಿ ಉತ್ಸವದಲ್ಲಿ ಪಾಲ್ಗೊಂಡಿದ್ದರು.



ಹುಳಿಯಾರು: ಸಮೀಪದ ಕುಪ್ಪೂರು–ತಮ್ಮಡಿಹಳ್ಳಿ ಮಠಕ್ಕೆ ಮಾಜಿ ಶಾಸಕರಾದ ಸಿ.ಬಿ.ಸುರೇಶ್‌ಬಾಬು ಅವರು ಶುಕ್ರವಾರ ಭೇಟಿ ನೀಡಿ ಶ್ರೀಮಲ್ಲಿಕಾರ್ಜುನದೇಶಿಕೇಂದ್ರ ಸ್ವಾಮಿಗಳ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ತಾಲ್ಲೂಕು ಜೆಡಿಎಸ್ ಅಧ್ಯಕ್ಷರಾದ ರಾಮಚಂದ್ರಯ್ಯ, ಕಾರ್ಯಾಧ್ಯಕ್ಷರಾದ ಶಶಿಧರ್, ಗ್ರಾಮ ಪಂಚಾಯಿತಿ ಸದಸ್ಯರಾದ ಕಾಮಲಾಪುರ ಕಿರಣ್, ಮುಖಂಡರಾದ ಶಿವಾನಂದ, ಚನ್ನಬಸವರಾಧ್ಯ ಇದ್ದರು.

## ಅಸ್ವಭಾವಿಕ ಮರಣ ಹೊಂದಿರುವ ಬಂದಿಯ ಕುಟುಂಬದ ಅವಲಂಬಿತರಿಗೆ ತಾತ್ಕಾಲಿಕ ಪರಿಹಾರ

ಬೆಳಗಾವಿ: ಬೆಳಗಾವಿಯ ಕೇಂದ್ರ ಕಾರಾಗ್ರಹದಲ್ಲಿ ಅಸ್ವಭಾವಿಕ ಮರಣ ಹೊಂದಿರುವ ಬಂದಿಯ ಕುಟುಂಬದ ಅವಲಂಬಿತರಿಗೆ ತಾತ್ಕಾಲಿಕ ಪರಿಹಾರದ ಮೊತ್ತವನ್ನು ವಿತರಿಸುವ ಸಲುವಾಗಿ ಬಂದಿಯ ಅವಲಂಬಿತರ ಪೂರಕ ದಾಖಲೆಗಳೊಂದಿಗೆ ತಮ್ಮ ಕ್ಲೇಮುಗಳನ್ನು ಪತ್ರಿಕಾ ಪ್ರಕಟಣೆ ಹೊರಡಿಸಿದ ದಿನದಿಂದ 3 ದಿನಗಳೊಳಗಾಗಿ ಮುಖ್ಯ ಅಧೀಕ್ಷಕರು, ಕೇಂದ್ರ ಕಾರಾಗ್ರಹ ಬೆಳಗಾವಿಯಲ್ಲಿ ಸಲ್ಲಿಸಬಹುದು ಎಂದು ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ ಪಾಟೀಲ್ ಅವರು ತಿಳಿಸಿದ್ದಾರೆ.

ಅಸ್ವಾಭಾವಿಕ ಮರಣಹೊಂದಿರುವ ಬಂದಿಯ ವಿವರ ; ನಿಂಗಪ್ಪ ತಂ. ನಿಂಗಪ್ಪ ಬುಗ್ಗಿ ಪೂಜೇರ ನರಸಾಪೂರ ಗ್ರಾಮ, ಬೆಳಗಾವಿ ಜಿಲ್ಲೆಯ ರಾಮದುರ್ಗ ತಾಲೂಕಿನ ಪೂಜೇರ ನರಸಾಪೂರ ಗ್ರಾಮದ ನಿಂಗಪ್ಪ ಬುಗ್ಗಿ, ಸಜಾ ಬಂದಿ ಸಂಖ್ಯೆ;2287, ಹಾಗೂ ಪರಿಹಾರ ಮೊತ್ತ; 2,04,500.00 ರೂಗಳು ಇರುತ್ತವೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಹುಳಿಯಾರು ಪಪಂನಲ್ಲಿ 25.43 ಲಕ್ಷ ರೂ.ಉಳಿತಾಯ ಬಜೆಟ್

ಹುಳಿಯಾರು: ಹುಳಿಯಾರು ಪಟ್ಟಣ ಪಂಚಾಯ್ತಿಯ ಚುನಾಯಿತ ಆಡಳಿತ ಮಂಡಳಿಯ ಎರಡನೇ ಬಜೆಟ್ ಶುಕ್ರವಾರ ಮಂಡನೆಯಾಗಿದ್ದು ಪಪಂ ಅಧ್ಯಕ್ಷ ಕೆಎಂಎಲ್ ಕಿರಣ್ ಅವರು 25.43.415 ರೂ.ಗಳ ಉಳಿತಾಯ ಬಜೆಟ್ ಮಂಡಿಸಿದ್ದಾರೆ.



2023–24 ನೇ ಸಾಲಿನಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆಯಿಂದ 55 ಲಕ್ಷ ರೂ., ನೀರಿನ ತೆರಿಗೆಯಿಂದ 28 ಲಕ್ಷ ರೂ., ವಾಣಿಜ್ಯ ಸಂಕೀರ್ಣಗಳ ಬಾಡಿಗೆಯಿಂದ 35 ಲಕ್ಷ ರೂ. ಪರಿವೀಕ್ಷಣಾ ಶುಲ್ಕ, ಉದ್ಯಮ, ಕಟ್ಟಡ ಪರವಾನಗಿ, ಖಾತಾನಕಲು, ಖಾತಾ ಬದಲಾವಣೆ ಮತ್ತು ಇತರೆ ಶುಲ್ಕಗಳಿಂದ 35.80 ಲಕ್ಷ ರೂ. ಸೂಚನಾ ಫಲಕ, ಜಾಹೀರಾತು ತೆರಿಗೆಯಿಂದ 25 ಸಾವಿರ ರೂ. ವಿವಿಧ ತೆರಿಗೆಯಿಂದ 1327.85 ಲಕ್ಷ ರೂ. ಗಳ ಆದಾಯ ನಿರೀಕ್ಷಿಸಲಾಗಿದೆ.

15 ನೇ ಹಣಕಾಸು ಯೋಜನೆಯಿಂದ 113 ಲಕ್ಷ ರೂ. ವಿದ್ಯುತ್ ವೆಚ್ಚ ಮತ್ತು ಕುಡಿಯುವ ನೀರಿನ ಅನುದಾನ 63.50 ಲಕ್ಷ ರೂ. ನಗರೋತ್ಥಾನ ಹಂತ 4 ರಲ್ಲಿ 500 ಲಕ್ಷ ರೂ, ಎಸ್‌ಎಫ್‌ಸಿ ಕುಡಿಯುವ ನೀರು ಮತ್ತು ಎಸ್‌ಡಬ್ಲ್ಯೂಎಂ ಕಾಮಗಾರಿಗಳಿಗಾಗಿ 10 ಲಕ್ಷ ರೂ. ಎಸ್‌ಎಫ್‌ಸಿ ಸಾಮಾನ್ಯ ಅವತರಣ ಅನುದಾನ 50 ಲಕ್ಷ ರೂ. 15 ನೇ ಹಣಕಾಸು ಆಯೋಗದಿಂದ 100 ಲಕ್ಷ ರೂ. ಇತರೆ ಅವತರಣದಡಿ ನಿರೀಕ್ಷಿತ ಅನುದಾನ 50 ಲಕ್ಷ ರೂ. ಅನುದಾನ ಬರುವ ನಿರೀಕ್ಷೆ ಇಟ್ಟುಕೊಂಡಿದ್ದಾರೆ.

ಒಟ್ಟಾರೆ ಪ್ರಾರಂಭಿಕ ಶಿಲ್ಕು 3.16 ಕೋಟಿ ರೂ. ನೊಂದಿಗೆ 11.68 ಕೋಟಿ ರೂ. ಆದಾಯದ ನಿರೀಕ್ಷೆಯೊಂದಿಗೆ ಬಜೆಟ್ ತಯಾರಿಸಿದ್ದು ಇದರಲ್ಲಿ ಕುಡಿಯುವ ನೀರಿನ ಸೌಲಭ್ಯಕ್ಕೆ 1.60 ಕೋಟಿ ರೂ. ಉದ್ಯಾನವನ ಅಭಿವೃದ್ಧಿಗೆ 25 ಲಕ್ಷ ರೂ. ಸ್ಮಶಾನ ಅಭಿವೃದ್ಧಿಗೆ 10 ಲಕ್ಷ ರೂ. ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ 1.39 ಕೋಟಿ ರೂ. ಎಸ್‌ಸಿಎಸ್‌ಟಿ ಕಲ್ಯಾಣ, ಇತರ ಬಡಜನರು ವಾಸಿಸುವ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಮೂಲ ಸೌಕರ್ಯಕ್ಕೆ 15.29 ಲಕ್ಷ ರೂ. ಉದ್ಯೋಗ ಮೇಳ ಕಾರ್ಯಕ್ರಮಕ್ಕೆ 5 ಲಕ್ಷ ರೂ. ಕಚೇರಿ ಪೀಠೋಪಕರಣಗಳಿಗೆ 7 ಲಕ್ಷ ರೂ. ಸಿಬ್ಬಂದಿಗಳ ವೇತನಕ್ಕಾಗಿ 85 ಲಕ್ಷ ರೂ. ಆಡಳಿತ ವೆಚ್ಚಕ್ಕೆ 1.18 ಕೋಟಿ ರೂ. ಬೀಡಾಡಿ ನಾಯಿಗಳ ನಿಯಂತ್ರಣ ಹಾಗೂ ಹಂದಿಗಳ ಸಾಗಾಣಿ–ಕೆಗಾಗಿ 1 ಲಕ್ಷ ರೂ. ಕಾಯ್ದಿರಿಸುವ ಮೂಲಕ 14.59 ಕೋಟಿ ರೂ. ನಿರೀಕ್ಷಿತ ಖರ್ಚು ಕಳೆದು 25.43 ಲಕ್ಷ ರೂ. ಉಳಿತಾಯ ಮಾಡುವುದಾಗಿ ಬಜೆಟ್‌ನಲ್ಲಿ ತಿಳಿಸಿದ್ದಾರೆ.

ಪಪಂ ಉಪಾಧ್ಯಕ್ಷೆ ಶೃತಿಸನತ್, ಮುಖ್ಯಾಧಿಕಾರಿ ಡಿ.ಭೂತಪ್ಪ, ಸದಸ್ಯರುಗಳಾದ ಸಿದ್ದಿಕ್, ಸಂದ್ಯಾಕಿರಣ್, ರತ್ನಮ್ಮ, ಹೇಮಂತ್‌ಕುಮಾರ್, ರಾಜುಬಡಗಿ, ಮಹಮದ್‌ಜುಬೇರ್, ಚಂದ್ರಶೇಖರ್, ಪುಟ್ಟರಾಜು, ಗೀತಅಶೋಕ್‌ಬಾಬು, ಬಳೆದಾಸಪ್ಪ, ಸೇರಿದಂತೆ ಅಧಿಕಾರಿಗಳು, ಸಿಬ್ಬಂದಿ ಪಾಲ್ಗೊಂಡಿದ್ದರು.

# ಕಷ್ಟಗಳ ನಡುವೆಯು ಮಹಿಳೆಯರ ಸಾಧನೆ ಹೆಮ್ಮೆಯ ವಿಷಯ



ಮೋಳೆ: ಕಾಗವಾಡ ತಾಲೂಕಿನ ಶೇಡಬಾಳ ಪಟ್ಟಣದಲ್ಲಿ 26 ಮಹಿಳಾ ಸಂಘಗಳ 300 ಸದಸ್ಯರಿಂದ ಅಭೂತಪೂರ್ವ ವಿಶ್ವ ಮಹಿಳಾ ದಿನಾಚರಣೆ ಸಂಪನ್ನಗೊಂಡಿತು.

ಶೇಡಬಾಳ ಪಟ್ಟಣದ ಬಳವಂತ ಮಹಾದೇವ ಭಂಡಾರೆ ಪ್ರೌಢ ಶಾಲೆಯ ಸಭಾಂಗದಲ್ಲಿ ಇಲ್ಲಿನ ಸಖಿ ಮಹಿಳಾ ಮಂಡಳ ಆಶ್ರಯದಲ್ಲಿ ಜರುಗಿದ ವಿಶ್ವ ಮಹಿಳಾ ದಿನಾಚರಣೆ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಅಥಣಿ ಜೆ.ಎ. ಕಾಲೇಜಿನ ಕನ್ನಡ ಉಪನ್ಯಾಸಕರಾದ ಡಾ. ಪ್ರಿಯಂವದಾ ಹುಲಗಬಾಳಿ ಸರಸ್ವತಿ ದೇವಿಗೆ ಪೂಜೆ ಸಲ್ಲಿಸಿ, ಜ್ಯೋತಿ ಬೆಳಗುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು ಇಂದಿನ ಮಹಿಳೆಯರು ಜನ್ಮ ತಾಳುವ ಮುಂಚೆಯೇ ಭ್ರೂಣಾವಸ್ಥೆಯಿಂದಲೇ ಹಿಡಿದು, ಜೀವನಪೂರ್ತಿ ಹೋರಾಟ ಮಾಡಿ, ಸಾಧನೆ ಮಾಡಬೇಕಾದ ಪರಿಸ್ಥಿತಿ ಬಂದೊದಗಿದೆ. ಇವೆಲ್ಲ ಹೋರಾಟಗಳ ಮಧ್ಯೆಯೂ ಮಹಿಳೆಯರು ಪ್ರತಿ ರಂಗಗಳಲ್ಲಿಯೂ ಸಾಧನೆ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ಕೂಲಿ ಕಾರ್ಮಿಕಳಾಗಿ, ಮನೆಗೆಲಸದವಳಾಗಿ, ಇಂಜಿನೀಯರ್‌ಳಾಗಿ, ಡಾಕ್ಟರ್‌ಗಳಾಗಿ, ಪೈಲಟ್‌ಗಳಾಗಿ ಮತ್ತು ಸೈನ್ಯದಲ್ಲಿಯೂ ಆಯಾ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವುದು ಅವಳ ಸಾಧನೆಗೆ ಹಿಡಿದ ಕೈಗನ್ನಡಿಯಾಗಿದೆ. ಮಹಿಳೆಯರಿಗೆ ಗಂಡು ಮಕ್ಕಳನ್ನು ಬೆಳೆಸುವ ಜವಾಬ್ದಾರಿಗಿಂತ ಹೆಣ್ಣು ಮಕ್ಕಳನ್ನು ಬೆಳೆಸುವ ಜವಾಬ್ದಾರಿ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದ ಅವರು ಬಾಲ್ಯಾವಸ್ಥೆಯಿಂದ ಯವ್ವನಾವಸ್ಥೆಯ ವರೆಗೆ ಹೆಣ್ಣು ಮಕ್ಕಳಿಗೆ ತಾಯಂದಿರು ಉತ್ತಮ ಸಂಸ್ಕಾರ ನೀಡಿ, ಆದರ್ಶ ವ್ಯಕ್ತಿಗಳನ್ನಾಗಿ ರೂಪಿಸುವ ಜವಾಬ್ದಾರಿ ತಾಯಂದಿರದಾಗಿದೆ. ಅವರ ಆಗು ಹೋಗುಗಳ ಕಡೆಗೆ ಹೆಚ್ಚಿನ ಮುತುವರ್ಜಿ ವಹಿಸುವಂತೆ ಅನೇಕ ಉದಾಹರಣೆಗಳ ಸಹಿತ ವಿವರಿಸಿ, ಮಾತನಾಡಿದರು.

ಇದೇ ವೇಳೆ ಸಖಿ ಮಹಿಳಾ ಮಂಡಳದ ಅಧ್ಯಕ್ಷೆ ಮೃದುಲಾ ಪಾಟೀಲ ಮಾತನಾಡಿ, ಮಹಿಳೆಯರು ಎಲ್ಲ ರಂಗಗಳಲ್ಲಿ ಪುರುಷ ಸಮಾನರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇದರ ಜೊತೆಗೆ ತನ್ನ ಮಕ್ಕಳ ಉತ್ತಮ ಸಂಸ್ಕಾರ ನೀಡಿ, ಆದರ್ಶ ವ್ಯಕ್ತಗಳನ್ನಾಗಿ ರೂಪಿಸುವ ಗುರುತರವಾದ ಜವಾಬ್ದಾರಿ ಅವಳ ಮೇಲಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಮತಿ ಮೀನಾಕ್ಷಿ ಸಾಂಗಲೆ ವಹಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಕರೊನಾ ಸಮಯದಲ್ಲಿ ತಮ್ಮ ಜೀವದ ಹಂಗು ತೋರೆದು ಸಾರ್ವಜನಿಕರ ಸೇವೆ ಮಾಡಿದ 19 ಜನ ಆಶಾ ಕಾರ್ಯಕರ್ತೆಯರನ್ನು ನೆನಪಿನ ಕಾಣಿಕೆ ನೀಡಿ, ಸತ್ಕರಿಸಿ, ಸನ್ಮಾನಿಸಲಾಯಿತು. ಕಾರ್ಯಕ್ರಮಕ್ಕೂ ಮುಂಚೆ ವಿದ್ಯಾನಂದ ಸರ್ಕಲ್‌ನಿಂದ ಸಭಾ ಮಂಟಪದ ವರೆಗೆ ಮಹಿಳಾ ಜಾಗೃತಿ ಭವ್ಯ ರ್‍ಯಾಲಿ ಸಂಪನ್ನಗೊಂಡಿತು. ಮಹಿಳೆಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಈ ವೇಳೆ ಸಖಿ ಮಹಿಳಾ ಮಂಡಳದ ವಿದುಲಾ ಪಾಟೀಲ, ಅನೀತಾ ಸಂಗೋರಾಮ, ಪದ್ಮಾ ನರಸಗೌಡರ, ಸರೀತಾ ಪಾಟೀಲ, ರಂಜನಾ ಪಾಟೀಲ, ಸಾಧನಾ ಪಾಟೀಲ, ನೇತ್ರಾ ಕುಲಕರ್ಣಿ, ವೀಣಾ ಪಾಟೀಲ, ಭಾರತಿ ಯಂದಗೌಡರ, ಉಜ್ವಲಾ ಮಗದುಮ್ ಸೇರಿದಂತೆ ಅನೇಕ ಮಹಿಳಾ ಮಂಡಳದ ಸದಸ್ಯರು ಉಪಸ್ಥಿತರಿದ್ದರು. ರಂಜನಾ ಪಾಟೀಲ ಸ್ವಾಗತಿಸಿದರು. ಸಾಧನಾ ಪಾಟೀಲ ವಂದಿಸಿದರು. ಮಂಗಲಾ ಬಿ. ಗೌಡಾ ಕಾರ್ಯಕ್ರಮ ನಿರೂಪಿಸಿದರು.

# ಬೆಳಗಾವಿ: ಜಪ್ತಿ ಮಾಡಿದ ಸಾರಾಯಿಯನ್ನೇ ಎಗರಿಸಿದ ಅಬಕಾರಿ ಅಧಿಕಾರಿಗಳು, ಸಿಬ್ಬಂದಿ

ಬೆಳಗಾವಿ: ಜಪ್ತಿ ಮಾಡಿದ್ದ 753 ಸಾರಾಯಿ ಬಾಕ್ಸ್‌ಗಳ ಪೈಕಿ 301 ಬಾಕ್ಸ್‌ಗಳನ್ನೇ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕದ್ದಿದ್ದು, ಜಿಲ್ಲೆಯ ಅಬಕಾರಿ ಅಧಿಕಾರಿಗಳ ಕಾರ್ಯಯಕ್ಕೆ ಮೇಲಾಧಿಕಾರಿಗಳೇ ಶಾಕ್ ಆಗಿದ್ದಾರೆ.




ಇದು ಒಂದು ರೀತಿಯಲ್ಲಿ ಬೇಲಿಯೇ ಎದ್ದು ಹೋಲ ಮೈಯ್ದಂತಿದೆ. ಕೆಲ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಂದಾಗಿ ಇಡೀ ಅಬಕಾರಿ ಇಲಾಖೆಯೇ ತಲೆ ತಗ್ಗಿಸುವಂತಾಗಿದೆ. 301 ಬಾಕ್ಸ್‌ಲ್ಲಿದ್ದ 32 ಲಕ್ಷ ರೂ. ಮೌಲ್ಯದ ಇಂಪಿರಿಯಲ್ ಬ್ಲೂ, ವಿಸ್ಕಿ ಮದ್ಯದ ಬಾಟಲ್ ಕಳ್ಳತನ ಮಾಡಿದ್ದು, ಜಪ್ತಿಯಾದ ಮಾರನೇ ದಿನ ಐದು ಜನ ಸಿಬ್ಬಂದಿ ಮಾಡಿದ ಕರಾಮತ್ತು ಬೆಳಕಿಗೆ ಬಂದಿದೆ. ಪ್ರಕರಣದಲ್ಲಿ ಭಾಗಿಯಾಗಿದ್ದ ಅಬಕಾರಿ ನಿರೀಕ್ಷಕ ದಾವಲಸಾಬ್ ಸಿಂದೋಗಿ, ಸದಾಶಿವ ಕೋರ್ತಿ, ಅಬಕಾರಿ ಉಪ ನಿರೀಕ್ಷಕಿ ಪುಷ್ಪಾ ಗದಾಡಿ ಸೇರಿದಂತೆ ಐವರು ಸಿಬ್ಬಂದಿ ಮೇಲೆ ಎಫ್‌ಆಯ್‌ಆರ್ ದಾಖಲು ಮಾಡಲಾಗಿದೆ. ಜೊತೆಗೆ ಸಿಬ್ಬಂದಿಗಳನ್ನು ಅಮಾನತು ಮಾಡಿ ಅಬಕಾರಿ ಡಿಸಿ ಆದೇಶ ಹೊರಡಿಸಿದ್ದಾರೆ.

ಚುನಾವಣೆ ನಿಮಿತ್ತ ಅಕ್ರಮವಾಗಿ ಸಾಗಿಸುತ್ತಿದ್ದ ಸಾರಾಯಿಯನ್ನು ಅಬಕಾರಿ ಅಧಿಕಾರಿಗಳು ಮಾ. 7ರಂದು ಜಿಲ್ಲೆಯ ಖಾನಾಪುರ ತಾಲೂಕಿನ ಮೋದೆಕೊಪ್ಪ ಗ್ರಾಮದ ಬಳಿ ಜಪ್ತಿ ಮಾಡಲಾಗಿತ್ತು.

12 ಚಕ್ರದ ಕಂಟೇನರ್ ವಾಹನದಲ್ಲಿ ಗೋವಾದಿಂದ ಸಾಗಿಸುತ್ತಿದ್ದಾಗ 753ಬಾಕ್ಸ್ ಅಕ್ರಮ ಮದ್ಯ ಸಿಕ್ಕಿತ್ತು. ಈ ವೇಳೆ 301ಬಾಕ್ಸ್‌ಗಳನ್ನ ಬಚ್ಚಿಟ್ಟು, ಕೇವಲ 452ಬಾಕ್ಸ್ ಜಪ್ತಿ ಮಾಡಿದ್ದೇವೆ ಎಂದು ಅಬಕಾರಿ ಸಿಬ್ಬಂದಿಗಳು ಸುಳ್ಳು ಕೇಸ್ ದಾಖಲಿಸಿದ್ದಾರೆ.

# ನುಡಿದಂತೆ ನಡೆದ ಶಾಸಕ ಅನಿಲ ಬೆನಕೆ



ಬೆಳಗಾವಿ : ಬೆಳಗಾವಿ ಉತ್ತರ ಮತಕ್ಷೇತ್ರದ ಶಾಸಕ ಅನಿಲ ಬೆನಕೆ ಅವರು ಈ ಹಿಂದೆ ನೀಡಿದ ಮಾತಿನಂತೆ ಬೆಳಗಾವಿ ನಗರದ ಡಾ. ಬಿ. ಆರ್. ಅಂಬೇಡ್ಕರ ಉದ್ಯಾನವನದಲ್ಲಿ ಸುಸಜ್ಜಿತ ಗ್ರಂಥಾಲಯ, ಸಾಂಸ್ಕೃತಿಕ ಭವನ ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಐ.ಎ.ಎಸ್. ಕೆ.ಎ.ಎಸ್ ಐ.ಪಿ.ಎಸ್ ಕೋಚಿಂಗ ಸೆಂಟರ್ ನಿರ್ಮಾಣ ಮಾಡಲುರ ೂ. 1 ಕೋಟಿ 30 ಲಕ್ಷರೂಪಾಯಿಯ ಅನುದಾನದಲ್ಲಿ ಕಾಮಗಾರಿಯನ್ನು ಕೈಗೆತ್ತಿಕೊಂಡು ಚಾಲನೆ ನೀಡಿದರು.

ಭೂಮಿ ಪೂಜೆ ಸಲ್ಲಿಸಿ ಮಾತನಾಡಿದ ಶಾಸಕರುಕ್ಷೇತ್ರದ ಸಮಾಜದ ನಾಗರಿಕರನ್ನು ವಿಶ್ವಾಸಕ್ಕೆ ತೆಗೆದು–ಕೊಂಡು ಅವರಿಗೆ ನೀಡಿದ ಮಾತಿನಂತೆ ಬೆಳಗಾವಿ ನಗರದ ಭೀಮ್ಸ್ ಆಸ್ಪತ್ರೆ ಎದುರುಗಡೆ ಇರುವ ಡಾ. ಬಾಬಾಸಾಹೇಬ ಅಂಬೇಡ್ಕರ ಉದ್ಯಾನವನದಲ್ಲಿ ರಾಜ್ಯ ಸರ್ಕಾರ ವತಿಯಿಂದ 1 ಕೋಟಿ 30 ಲಕ್ಷಅನುದಾನದಲ್ಲಿ ಉದ್ಯಾನವನದಲ್ಲಿ ಸುಸಜ್ಜಿತ ಡಿಜಿಟಲ್‌ಗ್ರಂಥಾಲಯ, ಸಾಂಸ್ಕೃತಿಕ ಭವನ, ಐಎಎಸ್, ಐಪಿಎಸ್, ಕೆಎಎಸ್ ತರಬೇತಿಕೇಂದ್ರ ನಿರ್ಮಾಣ ಮಾಡಲು ಭೂಮಿ ಪೂಜೆಯನ್ನು ಸಲ್ಲಿಸಿ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದರು.

ಡಾ. ಬಾಬಾಸಾಹೇಬ ಅಂಬೇಡ್ಕರಅವರು ಬೆಳಗಾವಿ ನಗರಕ್ಕೆ ಬಂದು ಹೋಗಿದ್ದಾರೆ, ಬೆಳಗಾವಿಗೆ ಅಂತಹ ಮಹಾನ ನಾಯಕರು ಬಂದು ಹೋಗಿರುವುದು ನಮಗೆಲ್ಲರಿಗೂ ಹೆಮ್ಮೆಯ ವಿಷಯ ಮತ್ತು ಬೆಳಗಾವಿ ಪುಣ್ಯ ಭೂಮಿಯಾಗಿದೆ ಎಂದರು. ಉದ್ಯಾನವನಅಭಿವೃದ್ಧಿ ಹೊಂದಿದ ನಂತರವಿದ್ಯಾರ್ಥಿಗಳಿಗೆ ಅನುಕೂಲವಾಗುವುದು ಎಂದರು. ನಗರದಲ್ಲಿ ಬಡಕುಟುಂಬದ ಮಕ್ಕಳಿಗೆ ಉನ್ನತ ಶಿಕ್ಷಣ ಒದಗಿಸುವುದು ಹಾಗೂ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುವುದು ನಮ್ಮಗುರಿಯಾಗಿದೆ.

ಈ ಉದ್ಯಾನವನದಲ್ಲಿ ಸುಸಜ್ಜಿತ ಡಿಜಿಟಲ್ ಗ್ರಂಥಾಲಯ ಮತ್ತು ಸಾಂಸ್ಕೃತಿಕ ಭವನ ನಿರ್ಮಾಣ ಮಾಡಲಾಗುತ್ತಿದ್ದು, ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಕೈಗೊಂಡು 3 ತಿಂಗಳ ಒಳಗಾಗಿ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕರೊಂದಿಗೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಆನಂದ ಪಾಟೀಲ, ನಗರ ಸೇವಕ ಸಂದೀಪ ಜಿರಗಿಹಾಳ, ಸವಿತಾ ಕಾಂಬಳೆ, ರೂಪಾ ಚಿಕ್ಕಲದಿನ್ನಿ, ಡಾ. ಬಿ. ಆರ್. ಅಂಬೇಡ್ಕರ ಸಾಂಸ್ಕೃತಿಕ ಭವನ ಸಮೀತಿ ಸದಸ್ಯರಾದ ಹಾಗೂ ದಲಿತ ಮುಖಂಡರಾದ ಮಲ್ಲೇಶ ಚೌಗುಲೆ, ಮಹಾದೇವ ತಳವಾರ, ಮಂಜುನಾತ ಪಮ್ಮಾರ, ಮಹಾದೇವರಾಠೋಡ, ಪ್ರಸಾದದೇವರಮನಿ, ಪ್ರೀತಿಕುಕಡೆ, ಸಂತೋಷ ಕಾಂಬಳೆ, ದೀಪಕ ದಬಾಡಿಯಾ, ಯಲ್ಲಪ್ಪಕೋಲಕಾರ, ದುರ್ಗೇಶ ಮೈತ್ರಿ ಸೇರಿಂದತೆ ಹಲವಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಚುನಾವಣಾ ಅಕ್ರಮ: ಆರೋಪಿಗಳ ವಿರುದ್ಧ ಕಾನೂನು ಕ್ರಮ

ಬೆಳಗಾವಿ: 2023 ರಲ್ಲಿ ಮುಂಬರುವ ರಾಜ್ಯ ವಿಧಾನಸಭೆ ಚುನಾವಣೆಗಳ ಹಿನ್ನೆಲೆಯಲ್ಲಿ, ಚುನಾವಣಾ ಆಯೋಗದಿಂದ ಎಲ್ಲ ರಾಜಕೀಯ ಪಕ್ಷಗಳ ಸಭೆಯನ್ನು ಜರುಗಿಸಿ, ರಾಜಕೀಯ ಪಕ್ಷಗಳು, ಸಾರ್ವಜನಿಕರು ಚುಣಾವಣೆಗೆ ಸ್ಪರ್ಧಿಸಲಿರುವ ಸಂಭಾವ್ಯ ಅಭ್ಯರ್ಥಿಗಳು ಹಾಗೂ ಇತರರು ಪಾಲಿಸಬೇಕಾದ ಚುನಾವಣಾ ನೀತಿ ಸಂಹಿತೆಗಳ ಕುರಿತು ಈಗಾಗಲೇ ತಿಳಿಸಲಾಗಿದೆ.

ಬೆಳಗಾವಿ ಜಿಲ್ಲೆ, ಹಾಗೂ ಬೆಳಗಾವಿ ತಾಲೂಕಿನಲ್ಲಿ ಒಳಪಡುವ 13–ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದಲ್ಲಿನ ಸಂತಿ ಬಸ್ತವಾಡ ಗ್ರಾಮದ ಶಾಲಾ ಮೈದಾನ ಒಂದರಲ್ಲಿ ಮಾರ್ಚ.15 2023 ರಂದು ರಾತ್ರಿ 9 ಗಂಟೆಗೆ ಎಸ್ಸಿ, ಎಸ್ಟಿ ಸಮಾವೇಶದ ಹೆಸರಿನಲ್ಲಿ, ಮತದಾರರಿಗೆ ಆಮಿಷ ಒಡ್ಡುವ ಉದ್ದೇಶದಿಂದ, ಸುಮಾರು 3000 ಜನರನ್ನು ಸೇರಿಸಿದ್ದಾರೆ ಎಂಬ ದೂರು ಸ್ವೀಕೃತವಾದ ಮೇರೆಗೆ ಚುನಾವಣಾ ಫ್ಲೈಯಿಂಗ್ ಸ್ಕ್ವಾಡ್ ತಂಡವು ದಾಳಿ ಮಾಡಿದ್ದು, ಬಾಡೂಟ ವ್ಯವಸ್ಥೆಯನ್ನು ಮಾಡಿರುವುದು ಕಂಡುಬಂದಿದ್ದು, ಅಡುಗೆಗೆ ಬಳಸಲಾದ ಪಾತ್ರೆಗಳನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ.

ಬೆಳಗಾವಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಚುನಾವಣಾ ಅಕ್ರಮ ಎಸಗಿದ ಆರೋಪದ ಮೇರೆಗೆ ಸಂತಿಬಸ್ತವಾಡ ನ ನಾಗೇಂದ್ರ ಬಾಳಪ್ಪ ನಾಯಿಕ, ನಾಗೇಶ ಮನ್ನೋಳಕರ ಮತ್ತು ಇತರರ ವಿರುದ್ಧ ಪ್ರಥಮ ವರ್ತಮಾನ ವರದಿ (FIR) ಅನ್ನು ದಾಖಲಿಸಲಾಗಿದೆ ಎಂದು 13–ಬೆಳಗಾವಿ ಗ್ರಾಮೀಣ ವಿಧಾನಸಭಾ ಮತಕ್ಷೇತ್ರದ ಚುಣಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯದ್ದಲಗುಡ್ಡ ಚೆಕ್‌ಪೋಸ: 3 ಲಕ್ಷ 50 ಸಾವಿರ ನಗದು ವಶ

ಬೆಳಗಾವಿ: ಗೋಕಾಕ್ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯ ಯದ್ದಲಗುಡ್ಡ ಚೆಕ್‌ಪೋಸ್ಟನಲ್ಲಿ ಎಫ್.ಎಸ್.ಟಿ. ತಂಡದ ಅಧಿಕಾರಿಯವರ ತಪಾಸಣೆ ವೇಳೆ ವಾಹನ ಸಂಖ್ಯೆ ಕೆಎ 22 ಎಮ್‌ಎ 8728 ವಾಹನದಲ್ಲಿ 3.50000 ನಗದು ಹಣ ದೊರಕಿರುತ್ತದೆ.

ಸದರಿ ನಗದು ಹಣದ ಮಾಲಿಕರಾದ ಲಕ್ಷ್ಮಣ ಗಡಾದ ಅವರು ನಗದು ಹಣದ ಕುರಿತು ದಾಖಲೆಗಳನ್ನು ನೀಡಿರುವುದಿಲ್ಲ ಆದಕಾರಣ ಸದರಿ ಹಣವನ್ನು ವಶಪಡಿಸಿಕೊಂಡು ಗೋಕಾಕ ನಗರದ ಉಪಖಜಾನನೆಯ ಭದ್ರತಾ ಕೋಠಡಿಯಲ್ಲಿ ಇಟ್ಟು ಎಫ್.ಎಸ್.ಟಿ. ತಂಡದ ಅಧಿಕಾರಿಯವರು ಈ ಕಾರ್ಯಲಯಕ್ಕೆ ವರದಿ ಸಲ್ಲಿಸಿರುತ್ತಾರೆ ಎಂದು ಗೋಕಾಕ ತಹಶೀಲ್ದಾರ ಅವರು ಪ್ರಕಟಣೆಯಲ್ಲಿ ತಿಳಿಸಿರಿತ್ತಾರೆ.

# ಆಲೂಗಡ್ಡೆ ಸ್ಟೋರೇಜ ಮೇಲ್ಛಾವಣಿ ಕುಸಿತ: 8 ಜನ ಸಾವು



ಲಕ್ನೋ: ಆಲೂಗಡ್ಡೆ ಕೋಲ್ಡ್ ಸ್ಟೋ–ರೇಜ್ನ ಮೇಲ್ಛಾವಣಿ ಕುಸಿದು ಬಿದ್ದ ಪರಿಣಾಮ 8 ಮಂದಿ ಸಾವನ್ನಪ್ಪಿದ ಘಟನೆ ಉತ್ತರ ಪ್ರದೇಶದ ಸಂಭಾಲ್ ಚಂದೌಸಿ ಪ್ರದೇಶದಲ್ಲಿ ನಡೆದಿದೆ.

ಆಲೂಗಡ್ಡೆ ಕೋಲ್ಡ್ ಸ್ಟೋರೇಜ್ನ ಮಾಲೀಕರನ್ನು ಅಂಕುರ್ ಅಗರ್ವಾಲ್ ಮತ್ತು ರೋಹಿತ್ ಅಗರ್ವಾಲ್ ಎಂದು ಗುರುತಿಸಲಾಗಿದ್ದು, ಘಟನೆಗೆ ಸಂಬಂಧಿಸಿ ಇಬ್ಬರ ವಿರುದ್ಧವೂ ಪ್ರಕರಣ ದಾಖಲಾಗಿದೆ. ಈ ಹಿಂದೆಯೇ ಕೋಲ್ಡ್ ಸ್ಟೋರೇಜ್ ಶಿಥಿಲಾವಸ್ಥೆಯಲ್ಲಿದೆ ಎಂದು ವರದಿಯಾಗಿತ್ತು. ಆದರೆ ಕಟ್ಟಡ ಕುಸಿತಕ್ಕೆ ನಿಜವಾದ ಕಾರಣ ಇನ್ನೂ ತಿಳಿದು ಬಂದಿಲ್ಲ.

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಮತ್ತು ರಾಜ್ಯ ವಿಪತ್ತು ನಿರ್ವಹಣಾ ಪಡೆ ತಂಡಗಳು ರಕ್ಷಣಾ ಕಾರ್ಯಾಚರಣೆ ನಡೆಸುತ್ತಿವೆ. ಈ ಬಗ್ಗೆ ಮೊರಾಬಾದ್ ಡಿಐಜಿ ಶಲಭ್ ಮಾಥುರ್ ಮಾತನಾಡಿ, ಘಟನೆಯಲ್ಲಿ 8 ಮಂದಿ ಸಾವನ್ನಪ್ಪಿದ್ದಾರೆ.

11 ಮಂದಿಯನ್ನು ರಕ್ಷಿಸಲಾಗಿದೆ. ಕಟ್ಟಡದಲ್ಲಿ ನೆಲಮಾಳಿಗೆಯಿದ್ದು, ಅಲ್ಲಿಯೂ ಯಾರಾದರೂ ಸಿಲುಕಿಕೊಂಡಿದ್ದಾರಾ ಎಂದು ಹುಡುಕುವ ಪ್ರಯತ್ನ ನಡೆಸುತ್ತಿದ್ದೇವೆ ಎಂದು ತಿಳಿಸಿದರು.

ಅವಶೇಷಗಳಡಿ ಸಿಲುಕಿರುವ ಜನರನ್ನು ಹುಡುಕಲು ಅಧಿಕಾರಿಗಳು ಸ್ನಿಫರ್ ಡಾಗ್ಗಳನ್ನು ಬಳಸುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ಘಟನೆಗೆ ಸಂಬಂಧಿಸಿ ಕೋಲ್ಡ್ ಸ್ಟೋರೇಜ್ನ ಮಾಲೀಕ ಹಾಗೂ ಇತರ ಇಬ್ಬರ ವಿರುದ್ಧ ಪ್ರಕರಣ ದಾಖಲಾಗಿದೆ. ಜೊತೆಗೆ ನಾಲ್ವರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ನಾಪತ್ತೆಯಾದ ಆರೋಪಿಗಳಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.

# ಮಾ.21 ಪಟ್ಟಣಕ್ಕೆ ಸಿಎಂ: ಹಲವು ಕಾಮಗಾರಿಗಳ ಲೋಕರ್ಪಣೆ



ನಾಲತವಾಡ: ನಾನಾ ಅಭಿವೃದ್ಧಿ ಕಾಮಗಾರಿಗಳ ಲೋಕರ್ಪಣೆ ಹಾಗೂ ಶಂಕುಸ್ಥಾಪನೆ ನೇರವೇರಿಸಲು ಪಟ್ಟಣಕ್ಕೆ ಸಿಎಂ ಬಸವರಾಜ ಬೊಮ್ಮಾಯಿಯವರು ಮಾರ್ಚ 21ಕ್ಕೆ ನಾಲತವಾಡ ಪಟ್ಟಣಕ್ಕೆ ಆಗಮಿಸಲಿದ್ದಾರೆ ಎಂದು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಅಧ್ಯಕ್ಷರು ಹಾಗೂ ಶಾಸಕರಾದ ಎ.ಎಸ್.ಪಾಟೀಲ ನಡಹಳ್ಳಿ ಹೇಳಿದರು.ಸಿಎಂ ಆಗಮನದ ಹಿನ್ನಲೆ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಆವರಣದಲ್ಲಿ ಹೆಲಿಪ್ಯಾಡ್ ಲ್ಯಾಂಡಿಂಗ್ ಸ್ಥಳ ಪರಿಶೀಲನೆ ನಡೆಸಿದ ಅವರು ಸುದ್ದಿಗಾರೊಂದಿಗೆ ಮಾತನಾಡಿ, ಕಳೆದ 50 ವರ್ಷಗಳಿಂದ ಅಭಿವೃದ್ದಿಯಿಂದ ವಂಚಿತಗೊಂಡಿದ್ದ ನಾಲತವಾಡ ಪಟ್ಟಣದಲ್ಲಿ ನನ್ನ ಅಧಿಕಾರದ ಅವಧಿಯಲ್ಲಿ ಬ್ರಹತ್ ಬಸ್ ನಿಲ್ದಾಣ, ಸಭಾಭವನ, 120 ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆಗಳು, ಸಮಾಜ ಸುಧಾರಕ ಅಣ್ಣ ಬಸವಣ್ಣ, ಡಾ.ಬಾಬಾಸಾಹೇಬ ಅಂಬೇಡ್ಕರ್ ಹಾಗೂ ವೀರೇಶ್ವರ ಶರಣದ ಮತ್ಥಳಿಗಳನ್ನು ಸಿಎಂ ಅವರು ಲೋಕರ್ಪಣೆಗೊಳಿಸಲಿದ್ದಾರೆ ಎಂದರು.ವೀರೇಶ್ವರ ವಿದ್ಯಾ ಸಂಸ್ಥೆಯಲ್ಲಿ ಆಯೋಜಿಸಲಾಗುತ್ತಿದ್ದ ಬ್ರಹತ್ ವೇದಿಕೆಯನ್ನು ಉದ್ಘಾಟಿಸಲಿರುವ ಸಿಎಂ ಅವರು ಸಾರ್ವಜನೀಕರನ್ನುದ್ದೇಶಿಸಿ ಮಾತನಾಡಲಿದ್ದು ಕಾರ್ಯಕ್ರಮದಲ್ಲಿ ಹಲವಾರು ಶಾಸಕರು ಹಾಗೂ ಸಚಿವರು ಭಾಗವಹಿಸಲಿದ್ದಾರೆ.

# ಸಮಾಜದಲ್ಲಿ ಸುಖ, ಶಾಂತಿ, ನೆಮ್ಮದಿ ಕಾಣಲು ಜೈನ ಧರ್ಮದ ಸಂದೇಶ ಅಗತ್ಯ: ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಪ್ರಸ್ತುತ ಸಂದರ್ಭದಲ್ಲಿ ಜೈನ ಧರ್ಮದ ಸಂದೇಶಗಳನ್ನು ಹೆಚ್ಚು ಹೆಚ್ಚು ಪ್ರಚಾರಗೊಳಿಸಬೇಕಾದ ಅಗತ್ಯವಿದೆ ಎಂದು ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಮುತ್ನಾಳ ಗ್ರಾಮದಲ್ಲಿ ಶುಕ್ರವಾರ ನಡೆದ ಭಗವಾನ ಶ್ರೀ 1008 ಆದಿನಾಥ ತೀರ್ಥಂಕರ ಜಿನಬಿಂಬ ಪಂಚಕಲ್ಯಾಣ ಮಹಾ ಮಹೋತ್ಸವ ಹಾಗೂ ಭಗವಾನ ಶ್ರೀ ಬಾಹುಬಲಿ ಭವ್ಯ ಪ್ರತಿಮೆಯ ಮಹಾಮಸ್ತಕಾಭಿಷೇಕ ಕಾರ್ಯಕ್ರಮದಲ್ಲಿ ಭಾಗಿಯಾಗಿ ಅವರು ಮಾತನಾಡುತ್ತಿದ್ದರು. ಇಂದು ಸಮಾಜದಲ್ಲಿ ನಾವು ಬಯಸುವುದು ಶಾಂತಿಯನ್ನು. ತನ್ಮೂಲಕ ಎಲ್ಲರೂ ನೆಮ್ಮದಿಯಿಂದ ಬಾಳುವಂತಾಗಬೇಕು. ಜೈನ ಧರ್ಮದ ಸಂದೇಶದಲ್ಲಿ ಶಾಂತಿ, ಅಂಹಿಂಸೆಗೆ ಮೊದಲ ಆದ್ಯತೆ ನೀಡಲಾಗಿದೆ.

ಎಲ್ಲರೂ ಅದನ್ನು ಅಳವಡಿಸಿಕೊಂಡಾಗ ಸುಖ, ಶಾಂತಿ, ನೆಮ್ಮದಿ ಕಾಣಲು ಸಾಧ್ಯವಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪರಮಪೂಜ್ಯ ಭಟ್ಟಾರಕ ಭಟ್ಟಾಚಾರ್ಯ ಸ್ವಸ್ತಿ ಶ್ರೀ ಭಟ್ಟಾಕಲಂಕ ಸ್ವಾಮೀಜಿ ಸೋಂದಾಮಠ, ಪರಮಪೂಜ್ಯ ಭಟ್ಟಾರಕ ಪಟ್ಟಾಚಾರ್ಯ ಸ್ವಸ್ತಿ ಶ್ರೀ ಅಭಿನವ ಲಕ್ಷ್ಮೀಸೇನ ಮಹಾಸ್ವಾಮೀಜಿ, ಕೊಲ್ಹಾಪುರ, ಷ ಭ್ರ ಶ್ರೀ ಶಿವಾನಂದ ಶಿವಾಚಾರ್ಯ ಮಹಾಸ್ವಾಮಿಗಳು ಕೇದಾರ ಶಾಖಾಪೀಠ ಮುತ್ನಾಳ ಇವರು ವಹಿಸಿದ್ದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ರುದ್ರಗೌಡ ಪಾಟೀಲ, ಪಾರಿಶ್ ಪಾರಿಶ್ವಾಡ್, ಅಡಿವೆಪ್ಪಗೌಡ ಪಾಟೀಲ ಹಾಗೂ ಜೈನ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ಶ್ರೀ ಭದ್ರಬಾಹು ಮಹಾರಾಜರ 26ನೇ ಪುಣ್ಯ ತಿಥಿ ಆಚರಣೆ



ಬೆಳಗಾವಿ: ಸ್ಥಳಿಯ ಹಿಂದವಾಡಿಯ ಗೋಮಟೇಶ ವಿದ್ಯಾಪೀಠದಲ್ಲಿ ಶುಕ್ರವಾರ ದಿನಾಂಕ:17–03–2023 ರಂದು ಗೋಮಟೇಶ ವಿದ್ಯಾಪೀಠದ ಸಂಸ್ಥಾಪಕ ಅಧಿಷ್ಠಾತಾ, ಜ್ಞಾನಯೋಗಿ ಶಿಕ್ಷಣಮಹರ್ಷಿ ಜಿನೈಕ್ಯ 105 ಶ್ರೀ ಭದ್ರಬಾಹು ಮಹಾರಾಜರ 26 ನೇ ಪುಣ್ಯ ತಿಥಿಯನ್ನು ಶ್ರದ್ಧಾ ಭಕ್ತಿಗಳಿಂದ ಆಚರಿಸಲಾಯಿತು.

ಗೋಮಟೇಶ ವಿದ್ಯಾಪೀಠದ ಅಧಿಷ್ಠಾತಾ ಹಾಗೂ ಬೆಳಗಾವಿ ಗ್ರಾಮೀಣ ವಿಧಾನಸಭಾ ಮತ ಕ್ಷೇತ್ರದ ಮಾಜಿ ಶಾಸಕರು ಹಾಗೂ ಬೆಳಗಾವಿ ಗ್ರಾಮಾಂತರ ಜಿಲ್ಲೆಯ ಭಾಜಪಾ ಅಧ್ಯಕ್ಷರಾದ ಶ್ರೀ ಸಂಜಯ ಬಿ ಪಾಟೀಲ ಅವರು ಸ್ವಾಮಿಜೀಯವರ ಮೂರ್ತಿಗೆ ಮಾಲಾರ್ಪಣೆ ಮಾಡಿ ಗೌರವವನ್ನು ಅರ್ಪಿಸಿದರು. ಕಾರ್ಯಕ್ರಮದಲ್ಲಿ ಗೋಮಟೇಶ ವಿದ್ಯಾಪೀಠದ ನಿರ್ದೇಶಕರುಗಳಾದ ಶ್ರೀ ಸನತ್ ಕುಮಾರ ವ್ಹಿ. ವಿ. ಹಾಗೂ ಶ್ರೀ ರಾಜೇಶ ಪಾಟೀಲ ಅವರು ಉಪಸ್ಥಿತರಿದ್ದರು.

ವಿದ್ಯಾಪೀಠದ ಹಿತೈಸಿಗಳು ಮತ್ತು ಸಂಸ್ಥೆಯ ವಿವಿಧ ಶಾಖೆಗಳ ಪ್ರಾಂಶುಪಾಲರುಗಳಾದ ಶ್ರೀ ಡಿ.ಎಸ್.ಹನಗಂಡಿ, ಶ್ರೀ ಮಹೇಶ ಕಾರೇಕರ, ಶ್ರೀ ಸುನೀಲ ಪಾಟೀಲ, ಶ್ರೀಮತಿ ಸಾವಿತ್ರಿ ಬಿ ಪಾಟೀಲ, ಶ್ರೀಮತಿ ಜ್ಯೋತ್ಸನಾ ಹನಮಗೊಂಡ, ಶ್ರೀಮತಿ ಕಸ್ತೂರಿ ಎಮ್. ಹಾಗೂ ಶ್ರೀ ಬೈರು ಪಾಟೀಲ ಅವರು ಪಾಲ್ಗೊಂಡು ಜಿನೈಕ್ಯ ಸ್ವಾಮಿಜಿಯವರ ಮೂರ್ತಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ವಿದ್ಯಾಪೀಠದ ಎಲ್ಲ ಶಾಖೆಗಳ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಸ್ವಾಮಿಜೀಯವರ ಭಾವಚಿತ್ರಕ್ಕೆ ಪುಷ್ಪ ಅರ್ಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಗೋಮಟೇಶ ವಿದ್ಯಾಪೀಠದ ವಿಶ್ರಾಂತ ಪ್ರಾಂಶುಪಾಲರುಗಳಾದ ಶ್ರೀ ಎಸ್.ಕೆ.ಕಟ್ಟಿ ಅವರು ಕೂಡ ಉಪಸ್ಥಿತರಿದ್ದದು ವಿಶೇಷವಾಗಿತ್ತು.

# ಮಹಿಳೆ ನಾಪತ್ತೆ



ಬೆಳಗಾವಿ: ಬೆಳಗಾವಿಯ ಬಿ.ಕೆ ಕಂಗ್ರಾಳಿಯ ಕಲ್ಯಾಣಿ ನಗರದ ಮಹಿಳೆ ಭವಾನಿ ಯಲ್ಲಪ್ಪಾ ಪಾಟೀಲ (49) ಇವರು ಮಾ.10, 2023 ರಂದು ಬೆಳಿಗ್ಗೆ 6. ಗಂಟೆಗೆ ಮನೆಯಿಂದ ಕಾಣೆಯಾಗಿದ್ದಾರೆ ಎಂದು ಇವರ ಮಗ ಮಲ್ಲಪ್ಪಾ ಪಾಟೀಲ ಇವರು ಕಾಕತಿ ಪೊಲೀಸ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಕಾಣೆಯಾದ ಮಹಿಳೆ ಚಹರೆಪಟ್ಟಿ: ಎತ್ತರ 5.2 ಇಂಚು, ಸಾಧಾರಣ ಮೈ ಕಟ್ಟು, ಗೋದಿಗೆಂಪು ಮೈ ಬಣ್ಣ, ಕೋಲು ಮುಖ, ಉದ್ದನೆಯ ಮೂಗು, ಚೂಡಿದಾರ ನೀಲಿ ಬಣ್ಣದ ಪ್ಯಾಂಟ ಧರಿಸಿರುತ್ತಾಳೆ ಹಾಗೂ ಕನ್ನಡ ತೆಲಗು ಹಿಂದಿ ಭಾಷೆ ಮಾತನಾಡುತ್ತಾಳೆ.

ಸದರಿ ಮಹಿಳೆ ಬಗ್ಗೆ ಮಾಹಿತಿ ದೊರೆತಲ್ಲಿ ಕಾಕತಿ ಪೋಲಿಸ್ ಠಾಣೆಗೆ ಸಂಪರ್ಕಿಸಬಹುದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಟ್ರಕ್–ಕಾರು ಢಿಕ್ಕಿ: ಪ್ರಯಾಣಿಕರು ಪಾರು



ಬೆಂಗಳೂರು: ಬೆಂಗಳೂರು–ಮೈಸೂರು ಎಕ್ಸ್ ಪ್ರೆಸ್ ವೇನಲ್ಲಿ ಮತ್ತೊಂದು ಅಪಘಾತ ಸಂಭವಿಸಿದ್ದು, ಟಿಪ್ಪರ್ ಟ್ರಕ್ ಮತ್ತು ಕಾರಿನ ನಡುವೆ ಢಿಕ್ಕಿ ಸಂಭವಿಸಿದೆ.

ಮೈಸೂರು–ಬೆಂಗಳೂರು ದಶಪಥ ರಸ್ತೆಯ ರಾಮನಗರ ಬೈಪಾಸ್ನ ಸಂಘ ಬಸವನದೊಡ್ಡಿ ಬಳಿ ದಶಪಥ ಹೆದ್ದಾರಿ ಮೇಲ್ಸೇತುವೆವೊಂದರಲ್ಲಿ ಶುಕ್ರವಾರ ಬೆಳಗ್ಗೆ ಈ ಘಟನೆ ನಡೆದಿದೆ. ಕಾರು, ಟಿಪ್ಪರ್ ನಡುವೆ ಅಪಘಾತ ಸಂಭವಿಸಿದ್ದು, ಈ ವೇಳೆ ಕಾರು ಜಖಂಗೊಂಡಿದೆ. ಕಾರಿನಲ್ಲಿದ್ದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಹಾಗೆಯೇ ಟಿಪ್ಪರ್ ಮೇಲ್ಸೇತುವೆಗೆ ಒರಗಿ ನಿಂತಿದೆ.

ಸೇತುವೆ ಕೆಳಭಾಗದಲ್ಲಿ ಎಕ್ಸ್‌ಪ್ರೆಸ್ ಹೈವೇ ಇರುವುದರಿಂದ ಹೆಚ್ಚಿನ ವಾಹನ ಸಂಚಾರಿಸುತ್ತಿತ್ತು. ಏನಾದರು ಟಿಪ್ಪರ್ ಸೇತುವೆಯಿಂದ ಕೆಳಗೆ ಉರುಳಿದ್ದರೆ ವಾಹನಗಳ ಮೇಲೆ ಲಾರಿ ಉರುಳಿ ಹೆಚ್ಚಿನ ಅನಾಹುತ ಸಂಭವಿಸುವ ಸಾಧ್ಯತೆ ಇತ್ತು. ಅದೃಷ್ಟಾವಷತ್ ಭಾರಿ ಅನಾಹುತ ತಪ್ಪಿದಂತಾಗಿದೆ.

ಇನ್ನು ಕಳೆದ 8 ತಿಂಗಳಲ್ಲಿ ರಾಮನಗರ ವ್ಯಾಪ್ತಿಯಲ್ಲಿ 80ಕ್ಕೂ ಹೆಚ್ಚು ಅಪಘಾತಗಳು ಸಂಭವಿಸಿದ್ದು 40ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ.

# ಪ್ರತಿಭೆ, ಪರಿಶ್ರಮ, ಕೌಶಲ್ಯಗಳೇ ಉದ್ಯೋಗದ ಬುನಾದಿ: ಪ್ರೊ. ಶಿವಾನಂದ ಗೊರನಾಳೆ

ಬೆಳಗಾವಿ: ರಾಣಿಚನ್ನಮ್ಮ ವಿಶ್ವವಿದ್ಯಾಲಯ ಮತ್ತು ಸಂಗೊಳ್ಳಿ ರಾಯಣ್ಣ ಪ್ರಥಮದರ್ಜೆಘಟಕ ಮಹಾವಿದ್ಯಾಲಯಗಳ ವೃತ್ತಿ ಮಾರ್ಗದರ್ಶನ, ತರಬೇತಿ ಮತ್ತು ವಿದ್ಯಾರ್ಥಿಉದ್ಯೋಗ ಕೋಶಗಳು ಹಾಗೂ ದೇಶದ ಪ್ರತಿಷ್ಠಿತ ಸಾಫ್ಟವೇರ್ ಸಂಸ್ಥೆಯಾದ ಟಿಸಿಎಸ್ ಸಹಯೋಗದಲ್ಲಿ ಮಹಾವಿದ್ಯಾಲಯದ ಸಭಾಂಗಣದಲ್ಲಿಕ್ಯಾಂಪಸ್ ನೇಮಕಾತಿಡ್ರೈವ್ ಹಮ್ಮಿಕೊಳ್ಳಲಾಗಿತ್ತು. ಮೌಲ್ಯ ಮಾಪನ ಕುಲಸಚಿವರಾದ ಪ್ರೊ. ಶಿವಾನಂದ ಗೊರನಾಳೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ಸಮಕಾಲೀನ ಉದ್ಯೋಗದ ಮಾರುಕಟ್ಟೆಗಳಲ್ಲಿ ಅಭ್ಯರ್ಥಿಗಳ ಭಾಷಾಜ್ಞಾನ, ಮಾರುಕಟ್ಟೆಯ ಕೌಶಲ್ಯಗಳು, ಸಂವಹನ ಮತ್ತು ಪ್ರಸ್ತುತಿ ಕೌಶಲ್ಯಗಳು, ವೃತ್ತಿಯಲ್ಲಿ ವಿಶಿಷ್ಟತೆ ಮತ್ತು ಹೊಸತನದ ಹುಡುಕಾಟಗಳು ಮಾನದಂಡಗಳಾಗಿವೆ. ಅವುಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ನಮ್ಮ ವೃತ್ತಿಜೀವನದಕುರಿತು ನಾವೇ ನಿರ್ಧರಿಸಬೇಕು. ನಮ್ಮಜ್ಞಾನ, ಸಾಮರ್ಥ್ಯಕ್ಕೆ ತಕ್ಕಂತಹ ಉದ್ಯೋಗವನ್ನು ಆರಿಸಿಕೊಳ್ಳಬೇಕು.

ಟಿಸಿಎಸ್ ದೇಶದ ಹೆಮ್ಮೆಯ ಸಂಸ್ಥೆ. ಈ ಸಂಸ್ಥೆಯಲ್ಲಿ ವೃತ್ತಿ ಆರಂಭಿಸ ಬೇಕೆಂಬುದುಎಲ್ಲರ ಬಯಕೆಯಾಗಿದೆ. ವಿದ್ಯಾರ್ಥಿಗಳಿಗೆ ಈ ಅವಕಾಶ ಸಿಕ್ಕಿರುವುದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ವಿಶ್ವ ವಿದ್ಯಾಲಯದ ವಿದ್ಯಾರ್ಥಿ ಉದ್ಯೋಗಕೋಶದ ಅಧಿಕಾರಿಗಳಾದ ಡಾ. ಆರ್.ಎನ್. ಮನಗೂಳಿ ಅವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ನಮ್ಮ ವಿಶ್ವವಿದ್ಯಾಲಯವು ಪ್ರತಿ ವರ್ಷ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಉದ್ಯೋಗವನ್ನು ಮಾಡಲು ವೇದಿಕೆಯನ್ನು ನಿರಂತರವಾಗಿ ಒದಗಿಸುತ್ತಿದೆ.

ಪ್ರತಿಭಾವಂತ ಮತ್ತುಅರ್ಹ ವಿದ್ಯಾರ್ಥಿಗಳಿಗೆ ಇದುಉತ್ತಮ ಅವಕಾಶ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯಡಾ. ಎಸ್.ಎಸ್. ತೇರದಾಳ ಅವರುಕ್ಯಾಂಪಸ್ ನೇಮಕಾತಿಯು ವಿದ್ಯಾರ್ಥಿಗಳಿಗೆ ಮಾತ್ರವಲ್ಲದೆ ನೇಮಕಾತಿ ಕಂಪನಿಗಳಿಗೂ ಪ್ರಯೋಜನವನ್ನು ನೀಡುತ್ತದೆ. ಸಂಸ್ಥೆಗೆ ಉತ್ತಮ–ಅರ್ಹಅಭ್ಯರ್ಥಿಯನ್ನುಆಯ್ಕೆ ಮಾಡಲುಇದು ಸೂಕ್ತವಾದ ಭೂಮಿಕೆಯಾಗಲಿದೆ.

ನಮ್ಮ ಮಹಾವಿದ್ಯಾಲಯವು ವಿದ್ಯಾರ್ಥಿಗಳಿಗೆ ಜ್ಞಾನದಜೊತೆಗೆ ವೃತ್ತಿಪರತೆಯ ಕೌಶಲಗಳ ಕುರಿತು ಮಾರ್ಗದರ್ಶನಮಾಡುತ್ತಿದೆಎಂದರು.

ಟಿಸಿಎಸ್ ಸಂಸ್ಥೆಯಎಚ್. ಆರ್. ಅಧಿಕಾರಿಗಳಾದ ಕಿರಣ ಎಂ. ಮತ್ತುಗಿರೀಶ್ ಪ್ರಕಾಶಅವರು ಸಂಸ್ಥೆ ಮತ್ತು ನೇಮಕಾತಿ ಪ್ರಕ್ರಿಯೆಯಕುರಿತು ವಿದ್ಯಾರ್ಥಿಗಳಿಗೆ ವಿವರಿಸಿದರು.

ಡಾ. ಮುಕುಂದ ಮುಂಡರಗಿ ಸ್ವಾಗತಿಸಿದರು. ವಿದ್ಯಾರ್ಥಿ ಲಕ್ಷ್ಮಣ ನಾಯ್ಕ ಪ್ರಾರ್ಥಿಸಿದರು.

ಉಪನ್ಯಾಸಕ ವಿನೂತ ವಡಗಾವಿ ವಂದಿಸಿದರು. ಡಾ. ಜ್ಯೋತಿ ಪಾಟೀಲ್ ನಿರೂಪಿಸಿದರು. ಮಹಾವಿದ್ಯಾಲಯದ ಬೋಧಕ –ಬೋಧಕೇತರ ಸಿಬ್ಬಂದಿ ಹಾಗೂ ಬೆಳಗಾವಿ ಜಿಲ್ಲೆಯ ಮಹಾವಿದ್ಯಾಲಯದ ವಿದ್ಯಾರ್ಥಿಉದ್ಯೋಗ ಕೋಶದ ಅಧಿಕಾರಿಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಪಘಾತ: ದಂಪತಿ ಸ್ಥಳದಲ್ಲೇ ಸಾವು



ಕೋಲಾರ: ಬೆಳ್ಳಂಬೆಳಗ್ಗೆ ಜವರಾಯನ ಅಟ್ಟಹಾಸಕ್ಕೆ ದಂಪತಿಗಳಿಬ್ಬರ ಸಾವನ್ನಪ್ಪಿದ ಘಟನೆ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಲಕ್ಷ್ಮಿಪುರ ಕ್ರಾಸ್ ನಲ್ಲಿ ಬಳಿ ನಡೆದಿದೆ. ಕಾರಿನಲ್ಲಿದ್ದ ದಂಪತಿಗಳಿಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಬೆಂಗಳೂರಿನಿಂದ ಮದನಪಲ್ಲಿಗೆ ತೆರಳುತ್ತಿದ್ದ ಇಟಿಯೂಸ್ ಕಾರು ಅಪಘಾತವಾಗಿದೆ. ಅಪಘಾತದಿಂದಾಗಿ ಕಾರು ರಸ್ತೆಯ ಬಲ ಬದಿಯ 20ರಿಂದ 25 ಅಡಿಗಳ ಹಳ್ಳಕ್ಕೆ ಬಿದ್ದಿದೆ. ಕಾರಿನಲ್ಲಿದ್ದ ದಂಪತಿಗಳಾದ ಶಫಿ (55) ಶಮಾ (50) ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ದಂಪತಿಗಳು ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಆಂಧ್ರಪ್ರದೇಶದ ಮದನಪಲ್ಲಿಗೆ ಕಾರಿನಲ್ಲಿ ತೆರಳುತ್ತಿದ್ದರು. ಮಗಳನ್ನು ವಿದೇಶಕ್ಕೆ ಹೋಗಲು ದೇವನಹಳ್ಳಿ ವಿಮಾನ ನಿಲ್ದಾಣಕ್ಕೆ ಡ್ರಾಪ್ ಮಾಡಿ ವಾಪಸ್ಸಾಗುತ್ತಿದ್ದ ಈ ದುರ್ಘಟನೆ ಸಂಭವಿಸಿದೆ.

ಮೃತ ದೇಹಗಳನ್ನು ಶ್ರೀನಿವಾಸಪುರ ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ರವಾನಿಸಲಾಗಿದೆ. ಘಟನಾ ಸ್ಥಳಕ್ಕೆ ಗೌನಿಪಲ್ಲಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089